ವಿಜಯಪುರ | ಸಂಪುಟ 04 | ಸಂಚಿಕೆ 042 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಏಪ್ರಿಲ್ 02, 2026



ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶೇ.79ರಷ್ಟು ಮತದಾರರು ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಪರವಾಗಿ ಒಲವು ತೋರಿವುದು ಕೆಪಿಸಿಸಿ ನಡೆಸಿದ ಸಮೀಕ್ಷೆಯಲ್ಲಿ ಖಚಿತವಾಗಿದೆ. ರಾಜ್ಯ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳು ಅವರ ಗೆಲುವಿಗೆ ಪ್ರಮುಖ ಅಂಶಗಳಾಗಿವೆ."

■ ಡಿ.ಕೆ.ಶಿವಕುಮಾರ್
ಉಪ ಮುಖ್ಯಮಂತ್ರಿ

## ನೀರಿನ ಸಮಸ್ಯೆಯಾಗದಂತೆ ಮುಂಜಾಗೃತಾ ಕ್ರಮ ಕೈಗೊಳ್ಳಿ



### ಚಡಚಣದಲ್ಲಿ ನಡೆದ ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್ ಸಭೆಯಲ್ಲಿ ನಾಗಠಾಣ ಶಾಸಕ ವಿಠ್ಠಲ ಕಟಕಧೋಂಡ ಅಧಿಕಾರಿಗಳಿಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ಚಡಚಣ: ಬೇಸಿಗೆಯ ತೀವ್ರತೆಗೆ ಮುನ್ನ ತಾಲೂಕಿನಲ್ಲಿ ಎಲ್ಲೆಡೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುಂಜಾಗೃತಾ ಕ್ರಮ ಕೈಗೊಳ್ಳಬೇಕು ಎಂದು ನಾಗಠಾಣ ಶಾಸಕ ವಿಠ್ಠಲ ಕಟಕಧೋಂಡ ಸೂಚಿಸಿದರು.

ಸ್ಥಳೀಯ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಅವರು ಮಾತನಾಡಿದರು. ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಉಷ್ಣತೆ ಹೆಚ್ಚಾಗುವ ಸಾಧ್ಯತೆ ಇದ್ದು, ಕೊಳವೆಬಾವಿಗಳು ಸೇರಿದಂತೆ ನೀರಿನ ಮೂಲಗಳು ಬತ್ತಿಹೋಗುವ ಪರಿಸ್ಥಿತಿ ಎದುರಾಗಬಹುದು. ಆದ್ದರಿಂದ ಪ್ರತಿಯೊಂದು ಗ್ರಾಮದಲ್ಲೂ ಜನರು ಹಾಗೂ ಜಾನುವಾರುಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರತಿ ಗ್ರಾಮ ಲೆಕ್ಕಾಧಿಕಾರಿ ಹಾಗೂ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಎದುರಾಗದಂತೆ ಗಮನಹರಿಸಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಸದಸ್ಯರ ಅವಧಿ ಮುಗಿದಿರುವ ಹಿನ್ನೆಲೆ ಆಡಳಿತಾಧಿಕಾರಿಗಳು ಮತ್ತು ಪಿಡಿಓಗಳು ಸಮನ್ವಯದಿಂದ ಕೆಲಸ ಮಾಡಬೇಕು. ವಾರಕ್ಕೊಮ್ಮೆ ಸಭೆ ನಡೆಸಿ ಸಮಸ್ಯೆಗಳ ಪರಿಶೀಲನೆ ಮಾಡಬೇಕು ಎಂದು ಹೇಳಿದರು.

ನೀರಿನ ಸಂಬಂಧ ಸಣ್ಣಪುಟ್ಟ ಕಾಮಗಾರಿಗಳಿಗೆ ಬಜೆಟ್ ಕೊರತೆ ಇದ್ದರೂ ಕೂಡ ತಕ್ಷಣ ತಮ್ಮ ಗಮನಕ್ಕೆ ತಂದರೆ ಅಗತ್ಯ ವ್ಯವಸ್ಥೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಯಾಲಿಸಿಸ್ ಚಿಕಿತ್ಸೆಗೆ ನೀರು ಅತಿ ಮುಖ್ಯ ಹಾಗಾಗಿ ವಾರದಲ್ಲಿ ಎರಡು ಸಲ ಸರಿಯಾಗಿ ನೀರು ಬೇಕೆಬೇಕು ಎಂದು ಆರೊಗ್ಯಾಧೀಕಾರಿಗಳು ಕೇಳಿದಾಗ ಪ.ಪಂ. ಮುಖ್ಯಾಧಿಕಾರಿ ತಾವಸೇ ಅವರು ನೀರಿನ ಕೊರತೆ ಆಗದಂತೆ ನೋಡಿಕೊಳ್ಳಲಾಗುವದು ಎಂದರು.

ಶಾಸಕರು ನೀರಿನ ವ್ಯವಸ್ಥೆ ಇರುವ ಸ್ಥಳದಲ್ಲಿ ಅಂದರೆ ಕೊಳವೆಭಾವಿ ಹಾಗೂ ಭೀಮಾ ನದಿಯ ಸ್ಥಳದಲ್ಲಿ ವಿದ್ಯುತ್ ಕೊರತೆ ಆಗದಂತೆ ನೋಡಿಕೊಳ್ಳಲು ಮತ್ತು ಟಿಸಿ ವಿಫಲವಾದರೆ ಕೂಡಲೆ ರಿಪೇರಿ ಮಾಡಿಸಿ ಅಳವಡಿಸುವಂತೆ ಎಇಇ ವಿಜಯಕುಮಾರ ಹವಾಲ್ದಾರ ಅವರಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಏಪ್ರಿಲ್ 1ರಿಂದ ಬೇಸಿಗೆ ಅವಧಿಯಲ್ಲಿ ಸರ್ಕಾರಿ ಕಚೇರಿಗಳ ಸಮಯವನ್ನು ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನಿಗದಿಪಡಿಸಿರುವುದರಿಂದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಕಚೇರಿಗೆ ಹಾಜರಾಗಬೇಕು. ಸಾರ್ವಜನಿಕರಿಗೆ ತೊಂದರೆ ಆಗದಂತೆ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಚಡಚಣ ಪಟ್ಟಣಕ್ಕೆ ಮಂಜೂರಾಗಿರುವ ಮೌಲಾನಾ ಆಜಾದ್ ವಸತಿ ಶಾಲೆ, ಸರ್ಕಾರಿ ಪದವಿ ಕಾಲೇಜುಗಳಿಗೆ ಕನಿಷ್ಠ 30 ಎಕರೆ ಜಮೀನು ಅಗತ್ಯವಿದೆ ಎಂದು ಶಾಸಕ ಪ್ರಶ್ನಿಸಿದಾಗ, ತಹಶೀಲ್ದಾರ ಸಂಜಯ ಇಂಗಳೆ ಪ್ರತಿಕ್ರಿಯಿಸಿ, ಪಟ್ಟಣದಿಂದ ಸುಮಾರು 3 ಕಿ.ಮೀ ದೂರದಲ್ಲಿರುವ ಹಾವಿನಾಳ ಗ್ರಾಮದಲ್ಲಿ ಸರ್ಕಾರದ 45 ಎಕರೆ ಜಾಗ ಲಭ್ಯವಿದ್ದು, ಅಲ್ಲಿ ಶಿಕ್ಷಣ ಹಬ್ ನಿರ್ಮಿಸಲು ಅವಕಾಶವಿದೆ ಎಂದು ತಿಳಿಸಿದರು.

ಒಂದೇ ಆವರಣದಲ್ಲಿ ವಸತಿ ಶಾಲೆ, ಕೈಗಾರಿಕಾ ತರಬೇತಿ ಕೇಂದ್ರ, ಪದವಿ ಕಾಲೇಜು ಸೇರಿದಂತೆ ವಿವಿಧ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಬಹುದಾಗಿದೆ ಎಂದರು.

ಬೇಸಿಗೆಯ ಬಿಸಿಲಿನಲ್ಲಿ ಹಳ್ಳ ಕೊಳ್ಳಗಳು, ಭಾವಿಗಳು ಬತ್ತಿಹೋಗುವ ಪರಿಣಾಮ ಜಾನುವಾರಗಳಿಗೆ ಹಾಗೂ ಪಕ್ಷಿಗಳಿಗೆ ಕುಡಿಯಲು ನೀರು ಸಿಗದೆ ಸಾವನ್ನಪ್ಪುವ ಪರಿಸ್ಥಿತಿ ಬರುವ ಸಾಧ್ಯತೆ ಹೆಚ್ಚಿರುವದರಿಂದ ಸಾರ್ವಜನಿಕರು ತಮ್ಮ ಮನೆಯ ಮುಂದೆ ಜಾನುವಾರಗಳಿಗೆ ಹಾಗೂ ಪಕ್ಷಿಗಳಿಗೆ ಕುಡಿಯಲು ನೀರಿನ ವ್ಯವಸ್ಥೆ ಮಾಡುವಂತೆ ಶಾಸಕರು ಸಾರ್ವಜನಿಕರಿಗೆ ಮನವಿ ಮಾಡಿಕೊಂಡರು.

ಸಭೆಯಲ್ಲಿ ತಾಲೂಕು ಟಾಸ್ಕ ಫೋರ್ಸ್ ನೋಡಲ್ ಅಧಿಕಾರಿ ಸಿ.ಬಿ. ಕುಂಬಾರ, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಅಶೋಕಕುಮಾರ ರಾಠೋಡ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಬಾಬಾಸಾಹೇಬ ತಾವಸೆ, ಆಹಾರ ನಿರೀಕ್ಷಕ ಶಿವಾನಂದ ಕೋಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.

# ಉಪಚುನಾವಣೆ ಗೆದ್ದರೆ ಕಾಂಗ್ರೆಸ್ ನಿಂದ ಮತ್ತಷ್ಟು ಭ್ರಷ್ಟಾಚಾರ : ಬಿಎಸ್ವೈ

## ವಿಶ್ವಾಸದ್ರೋಹಕ್ಕೆ ಮತ್ತೊಂದು ಹೆಸರು ಸಿದ್ದರಾಮಯ್ಯ ಎಂದು ಗಂಭೀರ ಆರೋಪ ಮಾಡಿದ ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ

ಬೆಂಗಳೂರು: ನಂಬಿಕೆ ಮತ್ತು ವಿಶ್ವಾಸ ದ್ರೋಹಕ್ಕೆ ಮತ್ತೊಂದು ಹೆಸರೇ ಸಿದ್ದರಾಮಯ್ಯ. ಮುಖ್ಯಮಂತ್ರಿಯಾದ ನಂತರ, ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಹಗಲು ದರೋಡೆ – ವರ್ಗಾವಣೆ, ಕಮಿಷನ್ ಮತ್ತು ಹಗರಣಗಳಲ್ಲಿ ನಿರತವಾಗಿದೆ ಮಾಜಿ ಸಿಎಂ ಬಿ,ಎಸ್ ಯಡಿಯೂರಪ್ಪ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯದ ಇತಿಹಾಸದಲ್ಲಿ ಅತಿ ಭ್ರಷ್ಟ ಸರ್ಕಾರ ಇದಾಗಿದೆ. ಕಾಂಗ್ರೆಸ್ ಸರ್ಕಾರ ಮುಡಾ ಹಗರಣ, ವಾಲ್ಮೀಕಿ ನಿಗಮದ ಹಗರಣಗಳನ್ನು ನಡೆಸಿದೆ, ರಾಜ್ಯದಲ್ಲಿ ತೆರಿಗೆ ಭಯೋತ್ಪಾದನೆ ಶುರುವಾಗಿದೆ ಎಂದು ಆರೋಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 3 ವರ್ಷದಲ್ಲಿ 5 ಲಕ್ಷ ಕೋಟಿ ಹೊಸ ಸಾಲ ಮಾಡಿ ದಾಖಲೆ ಬರೆದಿದ್ದಾರೆ. ಎಲ್ಲ ಇಲಾಖೆಗಳಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ದೂರಿದರು. ಆಸ್ಪತ್ರೆ, ಸಚಿವರ ಕಚೇರಿ, ಮುಖ್ಯಮಂತ್ರಿ ಕಚೇರಿಯಿಂದಲೇ ಭ್ರಷ್ಟಾಚಾರ ಆರಂಭವಾಗುತ್ತದೆ. ವರ್ಗಾವಣೆ ಉದ್ಯಮವಾಗಿ ಮಾರ್ಪಾಡಾಗಿದೆ. ಯಾವುದೇ ಅಧಿಕಾರಿ ಎಷ್ಟೇ ದುಡ್ಡು ಕೊಟ್ಟು ಬಂದರೂ, ಎಷ್ಟು ದಿನ ಇರುತ್ತಾನೆ ಎನ್ನುವ ನಂಬಿಕೆ ಇಲ್ಲ. ಆಡಳಿತ ಸಂಪೂರ್ಣ ಕುಸಿದು ಹೋಗಿದೆ ಎಂದು ಹೇಳಿದರು.

ವಾಲ್ಮೀಕಿ ಕಾರ್ಪೊರೇಷನ್ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ನಾಗೇಂದ್ರ ಅವರ ರಾಜೀನಾಮೆ ಹಳೆಯ ವಿಷಯವಾಗಿದೆ, ಆದರೆ ಎಸ್‌ಟಿ ಸಮುದಾಯಕ್ಕೆ ದ್ರೋಹ ಬಗೆದ ಆಡಳಿತ ಪಕ್ಷವನ್ನು ಜನರು ಕ್ಷಮಿಸಬಾರದು ಎಂದು ಅವರು ಹೇಳಿದರು. "ಕಾಂಗ್ರೆಸ್‌ನ ಇಚ್ಛೆಯಂತೆ ಸರ್ಕಾರ ನಡೆಯುತ್ತಿದೆ, ಅಭಿವೃದ್ಧಿ ಕಾರ್ಯಗಳನ್ನು ಹಿಂದಕ್ಕೆ ಹಾಕುತ್ತಿದೆ ಮತ್ತು ಜನರ ಹಿತಾಸಕ್ತಿಗಳನ್ನು ಪರಿಗಣಿಸುತ್ತಿಲ್ಲ" ಎಂದು ಅವರು ಹೇಳಿದರು.

ಪ್ರಸ್ತುತ ಸರ್ಕಾರ ಅತ್ಯಂತ ಭ್ರಷ್ಟ ಸರ್ಕಾರ ಎಂದು ಹೇಳಿದ ಯಡಿಯೂರಪ್ಪ, ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಯಲ್ಲಿ ಜನರು ಪಕ್ಷಕ್ಕೆ ಪಾಠ ಕಲಿಸುತ್ತಾರೆ ಎಂದು ಹೇಳಿದರು.

"ಕಾಂಗ್ರೆಸ್ ಸರ್ಕಾರ ತನ್ನ ಖಾತರಿ ಯೋಜನೆಗಳ ಹೆಸರಿನಲ್ಲಿ ರಾಜ್ಯವನ್ನು ದಿವಾಳಿ ಮಾಡಿದೆ. ರಸ್ತೆಗಳು ದಯನೀಯ ಸ್ಥಿತಿಯಲ್ಲಿವೆ. ಒಂದು ಕಿಲೋಮೀಟರ್ ರಸ್ತೆ ಕೂಡ ನಿರ್ಮಿಸಲಾಗುತ್ತಿಲ್ಲ. ರೈತರಿಗೆ ವಿದ್ಯುತ್ ನೀಡಲಾಗುತ್ತಿಲ್ಲ.

ಲಭ್ಯವಿರುವ ಎಲ್ಲಾ ಸರಕುಗಳ ಬೆಲೆಗಳು ಹೆಚ್ಚಾಗಿದ್ದು, ರಾಜ್ಯದ ಜನರ ಮೇಲೆ ಹೊರೆಯಾಗುತ್ತಿದೆ. ನಾವು ಅಧಿಕಾರದಲ್ಲಿದ್ದಾಗ, ರೈತ ಕಿಸಾನ್ ಸಮ್ಮಾನ್ ಯೋಜನೆಯಡಿಯಲ್ಲಿ 4,000 ಕೋಟಿ ರೂ.ಗಳನ್ನು ನೀಡಿದ್ದೇವೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನಿಧಿಯಿಂದ ಖಾತರಿ ಯೋಜನೆಗಳಿಗಾಗಿ 38,000 ಕೋಟಿ ರೂ.ಗಳನ್ನು ವರ್ಗಾಯಿಸುವ ಮೂಲಕ ಅದು ಜನರಿಗೆ ದ್ರೋಹ ಮಾಡಿದೆ" ಎಂದು ಯಡಿಯೂರಪ್ಪ ಹೇಳಿದರು.





"ಕಾಂಗ್ರೆಸ್ ಸರ್ಕಾರಕ್ಕೆ ಬಹುಮತವಿದೆ. ಅವರು ಉಪಚುನಾವಣೆಯಲ್ಲಿ ಗೆದ್ದರೆ, ಅದು ಅವರಿಗೆ ಅಧಿಕಾರದ ಅಮಲಿನಲ್ಲಿ ಹೆಚ್ಚಿನ ಭ್ರಷ್ಟಾಚಾರದಲ್ಲಿ ತೊಡಗಿಸಿಕೊಳ್ಳಲು ಅವಕಾಶ ನೀಡುತ್ತದೆ. ಆದ್ದರಿಂದ ಎರಡೂ ಕ್ಷೇತ್ರಗಳ ಮತದಾರರು ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಕಾಂಗ್ರೆಸ್‌ಗೆ ಪಾಠ ಕಲಿಸಬೇಕೆಂದು ನಾನು ಕೈಮುಗಿದು ಮನವಿ ಮಾಡುತ್ತೇನೆ"


■ ಬಿ.ಎಸ್.ಯಡಿಯೂರಪ್ಪ
ಮಾಜಿ ಮುಖ್ಯಮಂತ್ರಿ



ಭ್ರಷ್ಟ ಕಾಂಗ್ರೆಸ್‌ಗೆ ಸೂಕ್ತ ಪಾಠ ಕಲಿಸಲು ಅವಕಾಶ

"ಉಪಚುನಾವಣೆಗಳು ಶಾಸಕರನ್ನು ಆಯ್ಕೆ ಮಾಡುವ ಬಗ್ಗೆ ಮಾತ್ರವಲ್ಲ. ರಾಜ್ಯದ ಜನರ ಪರವಾಗಿ ಭ್ರಷ್ಟ ಕಾಂಗ್ರೆಸ್‌ಗೆ ಸೂಕ್ತ ಪಾಠ ಕಲಿಸಲು ಮತದಾರರಿಗೆ ಅವಕಾಶ ಸಿಕ್ಕಿದೆ. 2028 ರ ವಿಧಾನಸಭಾ ಚುನಾವಣೆಗೆ ಈ ಉಪಚುನಾವಣೆ ಮಾನದಂಡವಾಗಲಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

ನಾನು ದಾವಣಗೆರೆಯಲ್ಲಿ ನಮ್ಮ ಅಭ್ಯರ್ಥಿ ಶ್ರೀನಿವಾಸ್ ಪರ ಪ್ರಚಾರ ಮಾಡುತ್ತೇನೆ. ಏಪ್ರಿಲ್ 5 ಮತ್ತು 6 ರಂದು, ಬಾಗಲಕೋಟೆಯಲ್ಲಿ ನಮ್ಮ ಅಭ್ಯರ್ಥಿ ಚರಂತಿಮಠ ಪರ ಪ್ರಚಾರ ಮಾಡುತ್ತೇನೆ. ನಮ್ಮ ಅಭ್ಯರ್ಥಿಗಳು ಎರಡೂ ಕ್ಷೇತ್ರಗಳಲ್ಲಿ ಭಾರಿ ಅಂತರದಿಂದ ಗೆಲ್ಲುತ್ತಾರೆ ಎಂದು ನನಗೆ ನೂರಕ್ಕೆ ನೂರು ವಿಶ್ವಾಸವಿದೆ ಎಂದು ಯಡಿಯೂರಪ್ಪ ಹೇಳಿದರು.



"ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಬಜೆಟ್‌ನಲ್ಲಿ ಅಬಕಾರಿ ತೆರಿಗೆ ಹೆಚ್ಚಳ ಮಾಡಿದ್ದರು. ನಂತರ ಹಾಲಿನ ದರ, ವಿದ್ಯುತ್ ದರ ಹೆಚ್ಚಳ ಮಾಡಿದ್ದಾರೆ. 3 ವರ್ಷದಲ್ಲಿ 60 ಸಾವಿರ ಕೋಟಿ ಹೊಸ ತೆರಿಗೆಯನ್ನು ಜನರ ಮೇಲೆ ಹೇರಿದ್ದಾರೆ."

■ ಬಸವರಾಜ ಬೊಮ್ಮಾಯಿ
ಹಾವೇರಿ ಸಂಸದರು

## ಹಿಂಗಾರು ಹಂಗಾಮಿಗೆ ಏ.7 ವರೆಗೆ ಕಾಲುವೆ ಜಾಲಕ್ಕೆ ನೀರು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮುಳವಾಡ ಏತ ನೀರಾವರಿ ವೃತ್ತ ಟಕ್ಕಳಕಿ ಅಡಿ ಬರುವ ಕಾಲುವೆ ಜಾಲಕ್ಕೆ 2025–26ರ ಹಿಂಗಾರು ಹಂಗಾಮಿಗೆ ಕಾಲುವೆ ಜಾಲಕ್ಕೆ ನೀರು ಹರಿಸುವ ಅವಧಿಯನ್ನು ಏ.1 ರಿಂದ ಏ.7ರವರೆಗೆ ವಿಸ್ತರಿಸಲಾಗಿದೆ ಎಂದು ಕೆಬಿಜೆಎನ್‌ಎಲ್ ಮುಳವಾಡ ಏತ ನೀರಾವರಿ ಯೋಜನೆಯ ಟಕ್ಕಳಕಿ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

2025–26ನೇ ಸಾಲಿನ ಕೃಷ್ಣಾ ಮೇಲ್ದಂಡೆ ಯೋಜನೆಯ ನೀರಾವರಿ ಸಲಹಾ ಸಮಿತಿ ಸಭೆಯ ನಿರ್ಣಯದಂತೆ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಮುಳವಾಡ ಏತ ನೀರಾವರಿ ವೃತ್ತ ಟಕ್ಕಳಕಿ ಅಡಿಯಲ್ಲಿ ಬರುವ ಹಂತ–2 ರ ಪೂರ್ವ ಮತ್ತು ಪಶ್ಚಿಮ ಕಾಲುವೆ, ಸೊನ್ನ ಏತ ನೀರಾವರಿ, ರೊಳ್ಳಿ ಮನ್ನಿಕೇರಿ ಏತ ನೀರಾವರಿ ಮತ್ತು ತೆಗ್ಗಿ ಸಿದ್ದಾಪೂರ ಏತ ನೀರಾವರಿ ಯೋಜನೆಗಳ ಕಾಲುವೆ ಜಾಲಕ್ಕೆ ಹಿಂಗಾರು ಹಂಗಾಮಿಗೆ ದಿನಾಂಕ: 02–12–2025 ರಿಂದ 03–04–2026 ರವರೆಗೆ 14 ದಿನ ಚಾಲೂ ಹಾಗೂ 10 ದಿನ ಬಂದ ಅನುಸರಿಸಿ ಒಟ್ಟು 123 ದಿನಗಳವರೆಗೆ ನೀರು ಪೂರೈಸಲು ತೀರ್ಮಾನಿಸಲಾಗಿತ್ತು.

ಈಗ ನೀರಿನ ಲಭ್ಯತೆಯ ಅನುಸಾರ 2025–26ನೇ ಸಾಲಿನ ಹಿಂಗಾರು ಹಂಗಾಮಿಗೆ ನೀರು ಪೂರೈಸುವ ಅವಧಿಯನ್ನು ಏಪ್ರಿ ರಿಂದ ಏಪ್ರಿಲ್.7 ರವರೆಗೆ ವಿಸ್ತರಿಸಲಾಗಿದೆ ಎಂದವರು ತಿಳಿಸಿದ್ದಾರೆ.

ಯೋಜನಾ ವ್ಯಾಪ್ತಿಯ ಕಾಲುವೆಗಳಲ್ಲಿ ಬೆಳೆದು ನಿಂತಿರುವ ಲಘು ನೀರಾವರಿ ಬೆಳೆಗಳನ್ನು ಸಂರಕ್ಷಿಸಲು ಅವಶ್ಯವಿದ್ದಲ್ಲಿ ಮಾತ್ರ ನೀರನ್ನು ಮಿತವಾಗಿ ಬಳಸಬೇಕು ಎಂದವರು ಪ್ರಕಟಣೆಯಲ್ಲಿ ರೈತರಿಗೆ ಮನವಿ ಮಾಡಿದ್ದಾರೆ.

# ತಾಪಮಾನ ಹಿನ್ನೆಲೆ ಬದಲಾದ ಸರ್ಕಾರಿ ಕಚೇರಿ ಸಮಯ

## ನಿಗದಿತ ಸಮಯಕ್ಕೆ ಕಚೇರಿಯಲ್ಲಿರಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಖಡಕ್ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026ನೇ ಸಾಲಿನ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನ ಹಿನ್ನೆಲೆಯಲ್ಲಿ ಏಪ್ರಿಲ್.1ರಿಂದ ಜಿಲ್ಲೆಯಲ್ಲಿ ಸರಕಾರಿ ಕಚೇರಿ ಸಮಯ ಬದಲಾವಣೆಯಾಗುತ್ತಿದ್ದಂತೆಯೇ, ಬುಧವಾರ ಬೆಳಗ್ಗೆಯೇ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ನಗರದ ಕೃಷಿ ಇಲಾಖೆ ಜಂಟಿ ನಿರ್ದೇಶಕರ ಕಚೇರಿ ಸೇರಿದಂತೆ ವಿವಿಧ ಕಚೇರಿಗಳಿಗೆ ಭೇಟಿ ನೀಡಿ ಪರಿಶೀಲಿಸಿ,ಅಧಿಕಾರಿ, ಸಿಬ್ಬಂದಿ ಹಾಜರಾತಿ ಪರಿಶೀಲಿಸಿದರು.

ಕಚೇರಿ ಸಮಯ ಬದಲಾವಣೆ ಹಿನ್ನೆಲೆಯಲ್ಲಿ ಬುಧವಾರ ನಗರದ ವಿವಿಧ ಇಲಾಖೆಗಳ ಕಚೇರಿಗೆ ದಿಢೀರ್ ಭೇಟಿ ನೀಡಿ, ಸಿಬ್ಬಂದಿ ಹಾಜರಾತಿ ಪರಿಶೀಲನೆ ನಡೆಸಿದರು. ಎಲ್ಲ ಅಧಿಕಾರಿ, ಸಿಬ್ಬಂದಿ ನಿಗದಿತ ಸಮಯಕ್ಕೆ ಕಚೇರಿಗೆ ಹಾಜರಾಗಬೇಕು. ದೈನಂದಿನ ಕಚೇರಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಯಾವುದೇ ಸಿಬ್ಬಂದಿ ಯಾವುದೇ ಕಡತ:ವಹಿ ಬಾಕಿ ಉಳಿಸಿಕೊಳ್ಳದೇ ಕಾರ್ಯ ನಿರ್ವಹಿಸುವ ಮೂಲಕ ಕಡತಗಳನ್ನು ವಿಲೇವಾರಿಯಲ್ಲಿ ಪ್ರಗತಿ ಸಾಧಿಸಬೇಕು ಎಂದು ಸೂಚಿಸಿದರು.

ಸಾರ್ವಜನಿಕರಿಗೆ ಸ್ಪಂದಿಸಿ: ತಮ್ಮ ಎಂದಿನ ಕೆಲಸ ಕಾರ್ಯಗಳಿಗೆ ಆಯಾ ಕಚೇರಿಗೆ ಆಗಮಿಸುವ ಸಾರ್ವಜನಿಕರಿಗೆ ಸ್ಪಂದನೆ ನೀಡಬೇಕು. ಅವರ ಸಮಸ್ಯೆಗಳನ್ನು ಸಹಾನುಭೂತಿಯಿಂದ ಆಲಿಸಿ ಎಂದರು.

ಯಾವುದೇ ಲೋಪ–ದೋಷ ಉಂಟಾಗದಂತೆ ಕಾರ್ಯ ನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇಡೀ ಜಿಲ್ಲೆಯಾದ್ಯಂತ ಎಲ್ಲ ಸರ್ಕಾರಿ ಕಚೇರಿಗಳ ಸಿಬ್ಬಂದಿ ಬದಲಾದ ಸಮಯದಲ್ಲಿ ಕಚೇರಿಯಲ್ಲಿದ್ದುಕೊಂಡು ಯಾವುದೇ ಅಡೆತಡೆಯಿಲ್ಲದ ತಮ್ಮ ಕರ್ತವ್ಯ ನಿರ್ವಹಿಸಬೇಕು ಎಂದರು.

ಸರ್ಕಾರಿ ಕಚೇರಿ ಕೆಲಸಕ್ಕೆ ಸಂಬಂಧಿಸಿದಂತೆ ಯಾವುದೇ ರೀತಿಯ ಅನಾನುಕೂಲವಾಗದಂತೆ ಹಾಗೂ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತುರ್ತು ಸಂದರ್ಭಗಳಲ್ಲಿ ಯಾವುದೇ ಕಾರ್ಯವನ್ನು ನಿರ್ವಹಿಸಲು ನಿರ್ದೇಶನ ನೀಡಿದರೆ ಸಮಯದ ಮಿತಿಯಿಲ್ಲದೇ ಕೆಲಸ ನಿರ್ವಹಿಸಬೇಕೆಂದು ಇದೇ ವೇಳೆ ಜಿಲ್ಲಾಧಿಕಾರಿಗಳು ಜಿಲ್ಲೆಯ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗೆ ಸೂಚಿಸಿದರು.



### ನಿಗದಿತ ಸಮಯಕ್ಕೆ ಕಚೇರಿಯಲ್ಲಿರಲೇಕು

ಇದೇ ವೇಳೆ ಕಚೇರಿಯಲ್ಲಿ ಅಗತ್ಯ ಮೂಲಭೂತ ಸೌಲಭ್ಯ ವ್ಯವಸ್ಥೆ ಇರಬೇಕು. ಜೊತೆಗೆ ಕಚೇರಿ ಸಮಯಕ್ಕೆ ಸರಿಯಾಗಿ ಕಚೇರಿಗೆ ಹಾಜರಿರಬೇಕಾದುದು ಕಡ್ಡಾಯ. ಯಾವುದೇ ಕಚೇರಿಗೆ ಹಠಾತ್ ಭೇಟಿ ನೀಡಲಾಗುವುದು. ಕಚೇರಿಯ ವೇಳೆಯಲ್ಲಿ ಕಚೇರಿಯಲ್ಲಿದ್ದು ಕಡತಗಳನ್ನು ತಕ್ಷಣಕ್ಕೆ ವಿಲೇವಾರಿ ಮಾಡಬೇಕು ಎಂದು ಇದೇ ವೇಳೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೂ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಸೂಚಿಸಿದರು.

# ವಿಜಯಪುರದಲ್ಲಿ ಸಿಐಟಿಯು ವತಿಯಿಂದ ಕರಾಳ ದಿನ ಆಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಾಲ್ಕು ಕಾರ್ಮಿಕ ಕಾಯಿದೆಗಳ ವಿರುದ್ಧ 2025ರ ಏಪ್ರಿಲ್ ಒಂದರಂದು ಕರಾಳ ದಿನ ಆಚರಿಸಲು ಕೇಂದ್ರ ಕಾರ್ಮಿಕ ಸಂಘಟನೆಗಳು, ಸ್ವತಂತ್ರ ಕ್ಷೇತ್ರೀಯ ಮಹಾಸಂಘಗಳು ಮತ್ತು ಸಂಘಗಳ ಜಂಟಿ ವೇದಿಕೆಯವರು ಕರೆ ನೀಡಿದರು.

ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಮುಂದೆ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ (ಸಿಐಟಿಯು) ವತಿಯಿಂದ ಕರಾಳ ದಿನ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಿಐಟಿಯು ಸಂಚಾಲಕರಾದ ಲಕ್ಷ್ಮಣ ಹಂದ್ರಾಳ ಮಾತನಾಡಿ, ಏಪ್ರಿಲ್ ಒಂದರಂದೇ ಕೇಂದ್ರ ಸರ್ಕಾರ ನಾಲ್ಕು ಕಾರ್ಮಿಕ ಸಂಹಿತೆಗಳ ಅನುಷ್ಠಾನಕ್ಕಾಗಿ ಕೇಂದ್ರ ನಿಯಮಗಳನ್ನು ಜಾರಿಗೆ ತರುವುದಾಗಿ ಘೋಷಿಸಿದೆ. ವ್ಯವಹಾರ ಮಾಡಲು ಸುಲಭತೆ ಎಂಬ ಹೆಸರಿನಲ್ಲಿ ಕಾರ್ಮಿಕ ವಿರೋಧಿ ಮತ್ತು ಮಾಲೀಕರ ಪರವಾದ ಈ ಕಾರ್ಮಿಕ ಸಂಹಿತೆಗಳನ್ನು ಕಾರ್ಮಿಕ ಸಂಘಟನೆಗಳು ನಿರಂತರವಾಗಿ ವಿರೋಧಿಸುತ್ತಿವೆ ಮತ್ತು ಅವನ್ನು ರದ್ದುಪಡಿಸುವಂತೆ ಆಗ್ರಹಿಸುತ್ತಿವೆ. 2026ರ ಫೆಬ್ರವರಿ 12ರಂದು ನಡೆದ ಐತಿಹಾಸಿಕ ಸಾರ್ವತ್ರಿಕ ಮುಷ್ಕರದ ನಂತರವೂ ಕೇಂದ್ರ ಸರ್ಕಾರ ಈ ವಿಷಯದಲ್ಲಿ ಯಾವುದೇ ಗಂಭೀರ ಚರ್ಚೆಗೆ ಮುಂದೆ ಬಂದಿಲ್ಲ ಕೂಡಲೇ ಕಾರ್ಮಿಕ ಕಾಯ್ದೆಯನ್ನು ವಾಪಸ್ಸು ಪಡೆಯಬೇಕೆಂದು ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ ಸಹ ಸಂಚಾಲಕರಾದ ಅಣ್ಣಾರಾಯ ಈಳಗೇರಿ ಮಾತನಾಡಿ, ಕಾರ್ಮಿಕ ಸಂಹಿತೆಗಳ ರಚನೆಯ ಹಂತದಿಂದಲೂ ಕಾರ್ಮಿಕ ಸಂಘಟನೆಗಳೊಂದಿಗೆ ಯಾವುದೇ ಸಮಾಲೋಚನೆ ನಡೆಸಿಲ್ಲ. ಭಾರತದ ಕಾರ್ಮಿಕರ ಜೀವನಕ್ಕೆ ಸಂಬಂಧಿಸಿದಂತಹ ಮಹತ್ವದ ವಿಷಯದ ಬಗ್ಗೆ ಚರ್ಚಿಸಲು ಭಾರತೀಯ ಕಾರ್ಮಿಕ ಸಮ್ಮೇಳನವನ್ನೂ ಕರೆದಿಲ್ಲ. ಇದು ಭಾರತವು ಬದ್ಧವಾಗಿರುವ ಅಂತರರಾಷ್ಟ್ರೀಯ ಕಾರ್ಮಿಕ ಮಾನದಂಡಗಳ ಉಲ್ಲಂಘನೆಯಾಗಿದೆ ಎಂದು ಸಿಐಟಿಯು ಅಭಿಪ್ರಾಯ ಪಟ್ಟಿದೆ ಎಂದರು.

ಸಹ ಸಂಚಾಲಕ ಸುರೇಶ ಜೀಬಿ ಮಾತನಾಡಿದರು.

ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡ ಭೀಮರಾಯ ಪೂಜಾರಿ ಬೆಂಬಲ ವ್ಯಕ್ತಪಡಿಸಿ ಮಾತನಾಡಿದರು.

ಸುನಂದಾ ನಾಯಕ, ಸುಮಂಗಲಾ ಆನಂದಶೆಟ್ಟಿ ಮಾತನಾಡಿದರು.




ಈ ಸಂದರ್ಭದಲ್ಲಿ ನಾರಾಯಣ ಬಡಿಗೇರ, ಲಾಲಹ್ಮದ ಶೇಖ, ಚಂದ್ರಶೇಖರ ವಾಲಿಕಾರ, ಎಂ. ಎಸ್.ಕೊಂಡಗೂಳಿ, ಸುರೇಖಾ ವಾಗ್ಮೋರೆ, ಸುವರ್ಣ ಹಲಗಣಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಮಕ್ಕಳಿಲ್ಲದವರು ವಿಶೇಷ ದತ್ತು ಕೇಂದ್ರದಿಂದ ಮಗು ದತ್ತು ಸ್ವೀಕರಿಸಿ



## ವಿಜಯಪುರದ ಟಕ್ಕೆಯಲ್ಲಿ ಸರ್ಕಾರಿ ದತ್ತು ಸಂಸ್ಥೆ ಉದ್ಘಾಟಿಸಿದ ಜಿಲ್ಲಾಧಿಕಾರಿ ಡಾ. ಆನಂದ. ಕೆ ಸಲಹೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವರ್ಷದೊಳಗಿನ ಅನಾಥ ಪ್ರತಿ ಮಗುವನ್ನು ಕೌಟುಂಬಿಕ ಪರಿಸರದಲ್ಲಿ ಬೆಳೆಸಿ ಉತ್ತಮ ಪ್ರಜೆಯಾಗಿಸುವ ನಿಟ್ಟಿನಲ್ಲಿ ದತ್ತು ಪೋಷಕರು, ಏಕಪಾಲಕರು ವಿಶೇಷ ದತ್ತು ಕೇಂದ್ರದ ಮೂಲಕ ಮಗುವನ್ನು ದತ್ತು ಪಡೆದುಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ. ಅವರು ಹೇಳಿದರು.

ನಗರದ ಟಕ್ಕೆಯಲ್ಲಿರುವ ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ ಹೊಸ ಸರ್ಕಾರಿ ದತ್ತು ಸಂಸ್ಥೆಯನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದಲ್ಲಿಯ ಅನಾಥ ಹಾಗೂ ಒಪ್ಪಿಸಿದ ಮಕ್ಕಳನ್ನು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015 ಹಾಗೂ ದತ್ತು ಮಾರ್ಗಸೂಚಿ-2017ರನ್ವಯ ಕಾನೂನಾತ್ಮಕವಾಗಿ ದತ್ತು ಪಡೆಯಲು ಅವಕಾಶವಿದ್ದು, ಮಕ್ಕಳಿಲ್ಲದವರು, ಇಲ್ಲಿನ ಮಕ್ಕಳನ್ನು ದತ್ತು ಸ್ವೀಕರಿಸಬಹುದಾಗಿದೆ ಎಂದರು.

ಇನ್ನೊಂದೆಡೆ ಪೋಷಣೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳನ್ನು ಸರ್ಕಾರಿ ದತ್ತು ಸಂಸ್ಥೆಯಲ್ಲಿ ದಾಖಲಿಸಬಹುದು. ಮಕ್ಕಳಿಲ್ಲದ ಅಥವಾ ಮಕ್ಕಳನ್ನು ಹೊಂದಿದವರು, ಆಸ್ಪತ್ರೆಯಲ್ಲಿ, ಯಾವುದೇ ಪ್ರದೇಶದಲ್ಲಿ ಬಿಟ್ಟು ಹೋದ ಮಕ್ಕಳನ್ನು ಅಥವಾ ಯಾವುದೇ ಕಾರಣದಿಂದ ಯಾವುದೇ ಪೋಷಕರಿಂದ ಮಗುವನ್ನು ನೇರವಾಗಿ ಪಡೆಯುವುದು ಕಾನೂನು ಪ್ರಕಾರ ಅಪರಾಧವಾಗಿದೆ ಎಂದ ಅವರು, ಅದಕ್ಕೆ ಕಠಿಣ ಶಿಕ್ಷೆಯನ್ನು ನೀಡಲು ಕಾನೂನಿನಲ್ಲಿ ಅವಕಾಶವಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ನಿರ್ಮಲಾ ಎಚ್. ಸುರಪುರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದೀಪಾಕ್ಷಿ ಎಸ್. ಜಾನಕಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ಬಸಮ್ಮ ಹತ್ತರಕಿ, ಬಾಲಕರ ಬಾಲಮಂದಿರ ಕಿರಿಯ ಸಂಸ್ಥೆಯ ಅಧಿಕ್ಷಕಿ ಜಯಶ್ರೀ ಪವಾರ್ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಅಂಬೇಡ್ಕರ್ ಜಯಂತಿಗೆ ಎಲ್ಲರ ಸಹಕಾರ ಅಗತ್ಯ : ಬಿರಾದಾರ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ತಾಲ್ಲೂಕು ಆಡಳಿತ ಹಾಗೂ ತಾಲ್ಲೂಕು, ಪಟ್ಟಣ ಪಂಚಾಯಿತಿಗಳ ಸಹಯೋಗದಲ್ಲಿ ಅಂಬೇಡ್ಕರ್ ಜಯಂತಿಯಂದು ವಿವಿಧ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ. ಎಲ್ಲರ ಸಹಕಾರ ಅಗತ್ಯ ಎಂದು ತಹಶೀಲ್ದಾರ ನಿಂಗಪ್ಪ ಬಿರಾದಾರ ಹೇಳಿದರು.

ಪಟ್ಟಣದ ಪ್ರವಾಸಿಮಂದಿರದಲ್ಲಿ ಮಂಗಳವಾರ ಡಾ.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನರಾಮ್ ಜಯಂತಿಗಳ ಅಂಗವಾಗಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಜಯಂತಿ ಅಂಗವಾಗಿ ಹೂಗಳಿಂದ ಅಂಬೇಡ್ಕರ್ ವೃತ್ತದ ಅಲಂಕಾರ, ಸ್ತಬ್ಧಚಿತ್ರ, ಭಾವಚಿತ್ರ ಮೆರವಣಿಗೆ, ವಿಶೇಷ ಉಪನ್ಯಾಸ ಜೊತೆಗೆ ಉಪಹಾರ ವ್ಯವಸ್ಥೆ ಕಲ್ಪಿಸಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನೆರವೇರಿಸಲಾಗುತ್ತಿದೆ ಎಂದರು.

ದಲಿತ ಸಂಘರ್ಷ ಸಮಿತಿಯ ರಾವುತ ತಳಕೇರಿ, ಜಾನು ಗುಡಿಮನಿ, ರಾಜಕುಮಾರ ಸಿಂದಗೇರಿ ಜಯಂತಿ ರೂಪರೇಷೆಗಳ ಕುರಿತು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚೆಲುವಯ್ಯ, ಸಮಾಜ ಕಲ್ಯಾಣ ಅಧಿಕಾರಿ ಭವಾನಿ ಪಾಟೀಲ, ಬಿಇಓ ಎಂ.ಬಿ.ಯಡ್ರಾಮಿ, ಕೃಷಿ ಇಲಾಖೆಯ ಶರಣಗೌಡ ಬಿರಾದಾರ, ಶಿರಸ್ತೇದಾರ ಸುರೇಶ ಮ್ಯಾಗೇರಿ, ಹೆಸ್ಕಾಂನ ಯು.ಎಲ್.ಪಟ್ಟಣ, ಪಶು ಅಸ್ಪತ್ರೆಯ ರಾಮು ರಾಠೋಡ, ತೋಟಗಾರಿಕೆ ಇಲಾಖೆಯ ಸಚೀನ ಉಟಗಿ, ಸಿ.ಕೆ.ಕುದರಿ, ಎಸ್.ಎನ್.ಬಸವರೆಡ್ಡಿ, ಮುತ್ತುರಾಜ ಹಿರೇಮಠ, ಕಿರಣ ಪಾಟೀಲ, ಬಿ.ಬಿ. ಪಾಟೀಲ, ಸಿ.ಬಿ.ಗಡಗಿ, ಬಸವರಾಜ ತಳಕೇರಿ, ಕಾಶೀನಾಥ ಬಜಂತ್ರಿ, ನಿಜಲಿಂಗ ಮ್ಯಾಕೇರಿ ಸಹಿತ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ಏ.2 ರಂದು ಪೊಲೀಸ್ ಕಲ್ಯಾಣ ಮತ್ತು ಧ್ವಜ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಪೊಲೀಸ್ ಕಲ್ಯಾಣ ಹಾಗೂ ಧ್ವಜ ದಿನಾಚರಣೆ ಕಾರ್ಯಕ್ರಮವನ್ನು ಏಪ್ರಿಲ್ 2ರ ಗುರುವಾರ ಬೆಳಿಗ್ಗೆ 8 ಗಂಟೆಗೆ ಜಿಲ್ಲಾ ಪೊಲೀಸ್ ಕವಾಯತ್ ಮೈದಾನದಲ್ಲಿ ಆಯೋಜಿಲಾಗಿದೆ.

ನಿವೃತ್ತ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ಕೆ. ಮಾರಿಹಾಳ ಅವರು ವಂದನೆ ಸ್ವೀಕರಿಸಲಿದ್ದಾರೆ.

ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ. ಹಾಗೂ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ರಾಮನಗೌಡ ಹಟ್ಟಿ ಮತ್ತು ಜಿಲ್ಲೆಯ ಪೊಲೀಸ್ ಅಧಿಕಾರಿ, ಸಿಬ್ಬಂದಿ ವರ್ಗದವರು ಭಾಗವಹಿಸಲಿದ್ದಾರೆ ಎಂದು ಪೊಲೀಸ್ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಕಬ್ಬಿನ ಗದ್ದೆ ಬೆಂಕಿ ನಂದಿಸಲು ಹೋಗಿ ರೈತ ಸಜೀವ ದಹನ!

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಕಬ್ಬಿನ ಗದ್ದೆಗೆ ತಗುಲಿದ್ದ ಬೆಂಕಿಯನ್ನು ನಂದಿಸಲು ಹೋಗಿದ್ದ ರೈತನೊಬ್ಬ ಬೆಂಕಿಯ ಕೆನ್ನಾಲಿಗೆಗೆ ಸಿಲುಕಿ ಸಾವನ್ನಪ್ಪಿದ ದಾರುಣ ಘಟನೆ ಪಟ್ಟಣದ ಸಮೀಪದ ಮಹಾದೇವಪ್ಪನ ತೆವೆರ ಬಳಿ ನಡೆದಿದೆ.

ಮೃತರನ್ನು ಸಂಗಪ್ಪ ಈರಪ್ಪ ಕುಂಬಾರ (80) ಎಂದು ಗುರುತಿಸಲಾಗಿದೆ. ರವಿವಾರ ತಮ್ಮ ಸ್ವಂತ ಜಮೀನಿನಲ್ಲಿದ್ದ ಗೋಧಿ ಹುಲ್ಲು ಸುಡಲು ಬೆಂಕಿ ಹಚ್ಚಿದ ವೇಳೆ, ಆ ಬೆಂಕಿ ಪಕ್ಕದ ಜಮೀನಿನ ಕಬ್ಬಿನ ಗದ್ದೆಗೆ ಹಬ್ಬಿದೆ. ಅದನ್ನು ನಂದಿಸಲು ತೆರಳಿದ ಸಂಗಪ್ಪ ಅವರು ಅಕಸ್ಮಿಕವಾಗಿ ಬೆಂಕಿಗೆ ಸಿಲುಕಿದ್ದು, ಮಧ್ಯಾಹ್ನ ಸಮಯದಲ್ಲಿ ಸಜೀವ ದಹನಗೊಂಡಿದ್ದಾರೆ.

ಘಟನೆ ನಡೆದ ವೇಳೆ ಸುತ್ತಮುತ್ತ ಯಾರೂ ಇರಲಿಲ್ಲ. ಸಂಜೆ ವೇಳೆಗೆ ಮನೆಗೆ ಮರಳದ ಹಿನ್ನೆಲೆ ಕುಟುಂಬಸ್ಥರು ಹುಡುಕಾಟ ನಡೆಸಿದಾಗ ಘಟನೆ ಬೆಳಕಿಗೆ ಬಂದಿದೆ.

ಮಾಹಿತಿ ತಿಳಿದ ಕೊಲ್ಹಾರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಈ ಸಂಬಂಧ ಕೊಲ್ಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಕ್ಕಳಲ್ಲಿ ನಾಯಕತ್ವದ ಗುಣ ಬೆಳೆಸಲು ಸಮಾರಂಭಗಳು ಅಗತ್ಯ

# ಕಾರ್ಯನಿರತ ಪತ್ರಕರ್ತರ ಸಂಘದ ಸಿಂದಗಿ ತಾಲೂಕಾಧ್ಯಕ್ಷ ಮಹಾಂತೇಶ ನೂಲಾನವರ ಅಭಿಮತ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ಮಕ್ಕಳ ದೈಹಿಕ, ಮಾನಸಿಕ ಶ್ರೇಯೋಭಿವೃದ್ಧಿಗೆ ಶಾಲೆ ಆವರಣದ ಪರಿಸರವು ಪರಿಣಾಮ ಬೀರುತ್ತದೆ. ಈ ಶಾಲೆಯಲ್ಲಿ ಮಕ್ಕಳ ಪ್ರಗತಿಗೆ ಪೂರಕ ವಾತರಣವಿರುವುದು ತುಂಬಾ ಹರ್ಷ ತಂದಿದೆ. ಕೇವಲ ಎರಡೇ ವರ್ಷದಲ್ಲಿ ಶಾಲೆ ಇಷ್ಟೊಂದು ಎತ್ತರಕ್ಕೆ ಬೆಳೆಯಬೇಕಾದರೆ ಶಾಲಾ ವ್ಯವಸ್ಥಾಪಕ ಮಂಡಳಿಯ ಜೊತೆಗೆ ಸಿಬ್ಬಂದಿಗಳ ಶ್ರಮವೂ ಪ್ರಮುಖವಾಗಿದೆ ಎಂದು ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ಮಹಾಂತೇಶ ನೂಲಾನವರ ಹೇಳಿದರು.

ಪಟ್ಟಣದ ಕಿಡ್ಜಿ ಆಂಗ್ಲಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡ ವಾರ್ಷಿಕ ಸಂಸ್ಕಾರ ಸ್ನೇಹ ಸಮ್ಮೇಳನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಾಲಾ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರತಿಭೆ ಪ್ರದರ್ಶನ, ಸಾಂಸ್ಕೃತಿಕ ಚಟುವಟಕೆಗಳು ಮತ್ತುಸ್ನೇಹಬಾಂಧವ್ಯವನ್ನುಉತ್ತೇಜಿಸುವ ಪ್ರಮುಖ ಕಾರ್ಯಕ್ರಮವಾಗಿದೆ. ಇಂತಹ ಸಮಾರಂಭಗಳು ಮಕ್ಕಳಲ್ಲಿ ನಾಯಕತ್ವದ ಗುಣ, ಶಿಸ್ತು, ಸಂಸ್ಕಾರ, ಸಂಸ್ಕೃತಿ ಮತ್ತು ಮೌಲ್ಯಯುತ ಶಿಕ್ಷಣವನ್ನು ಬೆಳೆಸುವ ವೇದಿಕೆಯಾಗುತ್ತದೆ ಎಂದರು.

ಈ ವೇಳೆ 500ಕ್ಕೂ ಅಧಿಕ ವಚನಗಳ ವಾಚನ, ಭಗವದ್ಗೀತೆಯ 18 ಅಧ್ಯಾಯಗಳ ಹೆಸರು, ಶ್ರೀರಾಮ ವಂಶಸ್ಥರ ಹೆಸರು, 40 ಶ್ಲೋಕಗಳು, 60 ಸಂವಸ್ತರಗಳ ಹೆಸರು, 200ಕ್ಕೂ ಅಧಿಕ ಗಾದೆಗಳು, 30ಕ್ಕೂ ಅಧಿಕ ಒಡಪುಗಳು, ಅಶೋಕ ಚಕ್ರದೊಳಗಿನ 24 ಗೆರೆಗಳ ಅರ್ಥ, ಕರ್ನಾಟಕದ ಜಿಲ್ಲೆಗಳು, ದೇವಸ್ಥಾನಗಳ ವಿಶೇಷತೆಗಳು, ಸಿದ್ದೇಶ್ವರ ಶ್ರೀಗಳ ಹಿತನುಡಿಗಳು, ಭಾರತ ಸಂವಿಧಾನ ಪೀಠಿಕೆ, ಭೂಗೋಳ, ಸಾಮಾನ್ಯ ಜ್ಞಾನ ಸಂಬಂಧಿತ ಸೇರಿ ಸುಮಾರು 5ಸಾವಿರಕ್ಕೂ ಅಧಿಕ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ ವಿಶ್ವ ದಾಖಲೆ ಮಾಡಿದ ವಿಜಯಪರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ದಿಂಡವಾರ ಗ್ರಾಮದ ನಾಲ್ಕು ವರ್ಷದ ಬಾಲಕಿ ದಿತಿ ಹಣಮಂತ ಶಿರಶ್ಯಾಡ ಕುವರಿಗೆ ಕಿಡ್ಜಿ ಆಂಗ್ಲ ಮಾಧ್ಯಮ ಶಾಲೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಶಾಲೆಯ ಮಕ್ಕಳಿಂದ ವಿವಿಧ ನೃತ್ಯ, ಸಂಗೀತ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಕಾರ್ಯಕ್ರಮದಲ್ಲಿ ಸಂಸ್ಥೆಯ ಜ್ಯೋತಿ ರಾಜು ಗುತ್ತೇದಾರ, ವೈಭವ ಗುತ್ತೇದಾರ, ವೆಂಕಟೇಶ ಗುತ್ತೇದಾರ, ಶಿವು ಆಲಮೇಲ, ಪ್ರವೀಣ ಬಿರಾದಾರ, ಹಣಮಂತ ಶಿರಶ್ಯಾಡ, ಅನಿಲ ಕೆಂಭಾವಿ, ನವೀನ ತಾರಾಪೂರ, ದಿನೇಶ ಬಸರಕೋಡ ಸೇರಿದಂತೆ ಶಾಲೆಯ ಶಿಕ್ಷಕರು, ಸಿಬ್ಬಂದಿಗಳು ಹಾಗೂ ಪಾಲಕ ವರ್ಗ ಮತ್ತು ಮಕ್ಕಳು ಇದ್ದರು.

# ಮಹಿಳೆಯರು ಗ್ರಾಮೀಣ ಸಂಸ್ಕೃತಿಯ ಪ್ರತೀಕ : ನಾಗರತ್ನ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಮಹಿಳೆಯರು ಗ್ರಾಮೀಣ ಸಂಸ್ಕೃತಿಯ ಪ್ರತೀಕವಾಗಿ ಜೀವನ ಸಾಗಿಸಬೇಕು. ಮಹಿಳೆ ಎಲ್ಲರಿಗೂ ಮಾದರಿಯಾಗಿ ಬದುಕಬೇಕು ಎಂದು ಸಮಾಜ ಸೇವಕಿ, ಶಿಕ್ಷಣ ಪ್ರೇಮಿ ನಾಗರತ್ನ ಅಶೋಕ ಮನಗೂಳಿ ಅಭಿಪ್ರಾಯ ವ್ಯಕ್ತಪಡಿಸಿದರು.

ಸಿಂದಗಿ ತಾಲೂಕ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಹಾಗೂ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಆಶ್ರಮದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆ ಎಲ್ಲ ಕ್ಷೇತ್ರಗಳಲ್ಲಿ ಸಮರ್ಥವಾಗಿ ಸಾಧನೆಗೈದಿದ್ದಾರೆ. ವಿದ್ಯಾವಂತ ಮಹಿಳೆಯರು ಆರ್ಥಿಕವಾಗಿ ಸಬಲೀಕರಣಗೊಳ್ಳುತ್ತಿದ್ದಾರೆ. ಮಹಿಳೆಯರನ್ನು ಪೂಜ್ಯನೀಯ ಭಾವದಿಂದ ಭಾರತ ಕಾಣುತ್ತದೆ ಎಂದರು.

ಈ ವೇಳೆ ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶಿಲ್ಪಾ ಭಸ್ಮೆ ಮಾತನಾಡಿ, ಮಹಿಳೆಯರು ಇಂದು ವೃತ್ತಿ ಜೀವನ ಮತ್ತು ವೈಯಕ್ತಿಕ ಜೀವನವನ್ನು ಸಮತೋಲನದಲ್ಲಿ ನಿಭಾಯಿಸುವ ಚಾಕಚಕ್ಯತೆಯನ್ನು ಹೊಂದಿದ್ದಾರೆ. ಅವಕಾಶ ಸಿಕ್ಕಾಗಲೆಲ್ಲ ತನ್ನುನ್ನು ತಾವು ಎಲ್ಲ ರಂಗಗಳಲ್ಲಿ ಗುರುತಿಸಿಕೊಂಡಿದ್ದಾರೆ. ಶಿಕ್ಷಣ ನೀಡುವುದರ ಮೂಲಕ ಮಹಿಳೆಯರನ್ನು ವಿಶ್ವಕ್ಕೆ ಪರಿಚಯಿಸುವ ಪ್ರಯತ್ನ ಮಾಡುಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆಲಮೇಲ ಮಹಿಳಾ ಸಾಹಿತಿ ರೇವತಿ ಉಪ್ಪಿನ ವಹಿಸಿ ಮಾತನಾಡಿದರು. ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಾಯ್.ಸಿ.ಮಯೂರ ಪ್ರಾಸ್ತಾವಿಕ ಮಾತನಾಡಿದರು. ನ್ಯಾಯವಾದಿ ಭೌರಮ್ಮ ಮಾನವಿ, ಕಸಾಪ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ, ಶಿಕ್ಷಕಿ ಶೋಭಾ ಚಿಗರಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕರಾದ ಮಹಾದೇವಿ ಅಗಸರ. ಲಕ್ಷ್ಮಿಬಾಯಿ ಕುಂಬಾರ. ರೇಣುಕಾ ಚೌರ, ದಾನಮ್ಮ ಕುಂಬಾರ, ಪ್ರೇಮಾ ನಾಯಕ, ನಾಗಮ್ಮ ಎಮ್ಮಿ, ಶೈಲಾ ನ್ಯಾಮಣ್ಣವರ, ಮಹಾದೇವಿ ಹಿರೇಮಠ, ಇಮಾಂಬಿ ಬೋರಗಿ, ಮೀನಾಕ್ಷಿ ವಾಘಮೋರೆ, ಭೌರಮ್ಮ ಮಾನವಿ, ದಾನಮ್ಮ ಬಿರಾದಾರ. ಸುಚಿತ್ರಾ ಆಕಾಶ. ಶಾಂತಾಬಾಯಿ ಗುಬ್ಬೇವಾಡ ಸಾಧಕರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶೈಲಾ ಸ್ಥಾವರಮಠ, ಅನಸೂಯ ಪಾರಗೊಂಡ, ವರ್ಷಾ ಪಾಟೀಲ, ಜಗದೇವಿ ಬಿರಾದಾರ, ಜಯಶ್ರೀ ಕುಲಕರ್ಣಿ, ಶಶಿಕಲಾ ಅಂಗಡಿ, ಶಾರದಾ ಬೇಟಗೇರಿ, ಪ್ರತಿಭಾ ಚೆಳ್ಳಗಿ, ಜಯಶ್ರೀ ಹದನೂರ, ಶರಣಮ್ಮ ನಾಯಕ, ಶಾಂಭವಿ ಬೋರಗಿ, ಜಯಶ್ರೀ ನಾಟೀಕಾರ, ಶಾಂತು ರಾಣಾಗೋಳ. ಪುರುಷೋತ್ತಮ ಕುಲಕರ್ಣಿ, ವಿಶ್ವನಾಥ ಪಾಟೀಲ, ಇಸ್ಲಾಯಿಲ್ ಶೇಖ, ಜೈಭೀಮ ತಳಕೇರಿ, ರಾಮಕೃಷ್ಣ ಹೆಬ್ಬಾಳ, ಎಸ್.ಎಸ್.ಸಾತಿಹಾಳ ಸೇರಿದಂತೆ ಅನೇಕರು ಇದ್ದರು. ಶಶಿಕಲಾ ನಾಯ್ಕೋಡಿ ಮಹಿಳೆಯರ ಕುರಿತು ಗೀತಗಾಯನ ಮಾಡಿದರು. ಡಾ ಪ್ರಕಾಶ ರಾಗ ರಂಜನಿ ನಾಡಿಗೀತೆ ಪ್ರಸ್ತುತಗೊಳಿಸಿದರು. ಶಿಕ್ಷಕಿ ಸೈನಾಬಿ ಮಸಳಿ ಪ್ರಾರ್ಥಿಸಿದರು. ಲಕ್ಷ್ಮಿ ಪಾಟೀಲ ಸ್ವಾಗತಿಸಿದರು. ಕಸಾಪ ತಾಲೂಕ ಗೌರವ ಕಾರ್ಯದರ್ಶಿ ಆನಂದ ಶಾಬಾದಿ ನಿರೂಪಿಸಿದರು. ಸುನಂದಾ ವಂದಿಸಿದರು.

# ಯುವಪೀಳಿಗೆ ರಾಮನ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ರಾಮ ನವಮಿ ನಿಮಿತ್ತ ಶ್ರೀರಾಮನ ಮೂರ್ತಿ ಮೆರವಣಿಗೆ ಪಟ್ಟಣದ ದೇವಿಗುಡಿಯಿಂದ ಊರಿನ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಪಟ್ಟಣ ಪಂಚಾಯತ ಆವರಣದವರೆಗೆ ನಡೆಯಿತು.

ವಿಶ್ವ ಹಿಂದೂ ಪರಿಷತ್ ಉತ್ತರ ಪ್ರಾಂತದ ಸಾಮಾಜಿಕ ಸಮರಸತ ಪ್ರಮುಖರಾದ ಶ್ರೀಮಂತ ದುದ್ದಗಿ ಶ್ರೀರಾಮನ ಮೂರ್ತಿಗೆ ಪೂಜೆ ಸಲ್ಲಿಸಿ ಶೋಭಾ ಯಾತ್ರೆಗೆ ಚಾಲನೆ ನೀಡಿದರು.

ಸ್ವಾಮಿ ವಿವೇಕಾನಂದ ಸೇನೆ ಅಧ್ಯಕ್ಷ ಹಣಮಂತ ರಜಪೂತ ಮಾತನಾಡಿ, ಈಗಿನ ಯುವಪಿಳಿಗೆಗಳಾದ ನಾವುಗಳು ರಾಮನ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಮತ್ತು ನಮ್ಮ ಹಿಂದೂ ಆಚರಣೆಗಳನ್ನು ರೂಡಿಸಿಕೊಳ್ಳಬೇಕು. ನಮ್ಮ ಹಿಂದೂ ಧರ್ಮ ರಕ್ಷಣೆಗೆ ನಾವೆಲ್ಲರೂ ಸಿದ್ದರಿರಬೇಕು ಎಂದರು.

ಮುಖಂಡ ಕಮಲಾಕರ ಪತ್ತಾರ ಮಾತನಾಡಿ, ಹಿಂದೂ ಹುಡುಗಿಯರು ಮತಾಂತರ ವಾಗುವುದನ್ನು ತಡೆಗಟ್ಟಬೇಕಿದೆ. ಗೋವು ರಕ್ಷಣೆ ದೇಶರಕ್ಷಣೆ ಧರ್ಮ ರಕ್ಷಣೆ ಪ್ರತಿಯೊಬ್ಬ ಭಾರತೀಯ ಹಿಂದೂವಿನ ಕರ್ತವ್ಯವಾಗಿದೆ ಎಂದು ಹೇಳಿದರು.

ಮೆರವಣಿಗೆಯಲ್ಲಿ ವಿಜಯಪುರ ಶಾಸಕರ ಬಸವನಗೌಡ ಪಾಟೀಲ(ಯತ್ನಾಳ) ಭಾವಚಿತ್ರಗಳು ರಾರಾಜಿಸುತ್ತಿದ್ದವು. ಯುವಕರ ಬಾಯಿಯಲ್ಲಿ ಮುಂದಿನ ಮುಖ್ಯಮಂತ್ರಿ ಬಸನಗೌಡ ಪಾಟೀಲ ಎಂದು ಕೂಗುತ್ತಿದ್ದರು. ಬಿಜೆಪಿ ಪಟ್ಟಣ ಪಂಚಾಯತಿ ಸದಸ್ಯರು ಹಾಗೂ ಪ್ರಮುಖ ಕಾರ್ಯಕರ್ತರು ರಾಮನವಮಿಯಲ್ಲಿ ಭಾಗವಹಿಸಲಿಲ್ಲ.

ಮೆರವಣಿಗೆಯಲ್ಲಿ ಹಿಂದೂ ಮುಖಂಡ ಮಲ್ಲಿಕಾರ್ಜುನ ಅನಂತಗೋಳ, ಶಿವಾನಂದ್ ಮಾರ್ಸನಹಳ್ಳಿ, ರಾಜೇಂದ್ರ ರಾಠೋಡ, ಹೊನ್ನಪ್ಪ ಗುರುಕಾರ, ಬಾಬು ಬಿಜ್ಜರಗಿ, ಸಿದ್ದು ಹವಳಗಿ, ರತನ ಒಣಕುದರಿ, ನಿಂಗರಾಜ ಬಂಟನೂರ, ಶಿವಾನಂದ ರಾಯಚೂರ, ಬಂಡಯ್ಯ ಸ್ಥಾವರಮಠ, ರಾಹುಲ್ ಬಗಲಿ, ಅಶ್ವತ್ ಪತ್ತಾರ್, ರಾಹುಲ್ ರಜಪೂತ ಇತರರು ಇದ್ದರು.

# ಕೂಡಗಿ ಉಷ್ಣ ವಿದ್ಯುತ್ ಸ್ಥಾವರಕ್ಕೆ ಎಸಿ ಗುರುನಾಥ ದಡ್ಡೆ ಭೇಟಿ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಕೂಡಗಿ ಉಷ್ಣ ವಿದ್ಯುತ್ ಸ್ಥಾವರ (ಎನ್ಟಿಪಿಸಿ) ವ್ಯಾಪ್ತಿಯ ಕೃತಕ ಹಾರು ಬೂದಿ ಕೆರೆಗಳಿಂದ ಉಂಟಾಗುತ್ತಿರುವ ಸಮಸ್ಯೆಗಳ ವಿರುದ್ಧ ರೈತ ಸಂಘ ಹಾಗೂ ಸ್ಥಳೀಯ ರೈತರು ಬಹುದಿನಗಳಿಂದ ಆಕ್ರೋಶ ವ್ಯಕ್ತಪಡಿಸುತ್ತಿರುವ ಹಿನ್ನೆಲೆಯಲ್ಲಿ ಸೋಮವಾರ ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ರೈತ ಸಂಘದ ಮುಖಂಡರಾದ ಸೋಮು ಬಿರಾದಾರ ಹಾಗೂ ರಮೇಶ ಬೀಳಗಿ ಮಾತನಾಡಿ, ಹಾರು ಬೂದಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಲಾಗುತ್ತಿದೆ ಎಂದು ಆರೋಪಿಸಿದರು. ಮೊದಲು ಕೆರೆಯಲ್ಲಿ ನೀರು ತುಂಬಿಸಿ ಬೋಟ್‌ಗಳ ಮೂಲಕ ಬೂದಿಯನ್ನು ಟ್ಯಾಂಕರ್‌ಗಳಲ್ಲಿ ಸಾಗಿಸಲಾಗುತ್ತಿತ್ತು. ಆದರೆ ಇದೀಗ ನೀರು ಹರಿಸದೇ ಒಣ ಬೂದಿಯನ್ನು ಜೆಸಿಬಿ, ಹಿಟಾಚಿ ಯಂತ್ರಗಳ ಮೂಲಕ ತೆರೆದ ಟಿಪ್ಪರ್ ಹಾಗೂ ಲಾರಿಗಳಲ್ಲಿ ಸಾಗಿಸಲಾಗುತ್ತಿದೆ ಎಂದು ದೂರಿದರು.

ಇದರಿಂದ ರಾಸಾಯನಿಕ ಮಿಶ್ರಿತ ಬೂದಿ ಧೂಳು ಗಾಳಿಯಲ್ಲಿ ಹರಡಿ ಸುತ್ತಮುತ್ತಲಿನ ಗ್ರಾಮಗಳಿಗೆ ವ್ಯಾಪಿಸುತ್ತಿದ್ದು, ಕುಡಿಯುವ ನೀರು ಮತ್ತು ಆಹಾರ ಮಾಲಿನ್ಯಗೊಂಡು ಜನಜಾನುವಾರುಗಳಿಗೆ ತೀವ್ರ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ ಎಂದು ಹೇಳಿದರು.

ರೈತರ ಫಲವತ್ತಾದ ಕೃಷಿಭೂಮಿಯೂ ಹಾನಿಗೊಳಗಾಗಿ ಬೆಳೆಗಳ ಮೇಲೆ ಬೂದಿ ಆವರಿಸಿರುವುದರಿಂದ ನಷ್ಟ ಉಂಟಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸುಮಾರು 200-300 ಎಕರೆ ಪ್ರದೇಶದಲ್ಲಿರುವ ಕೃತಕ ಕೆರೆಗಳಿಗೆ ನೀರು ಹರಿಸಿ ಹಿಂದಿನಂತೆ ಬೋಟ್‌ಗಳ ಮೂಲಕವೇ ಬೂದಿ ತುಂಬಿ ಟ್ಯಾಂಕರ್ ಗಳಲ್ಲಿ ಬೂದಿ ಸಾಗಿಸಬೇಕು. ಕೆರೆಗಳ ಸುತ್ತ ತಂತಿಬೇಲಿ ನಿರ್ಮಿಸಬೇಕು. ಹಾರು ಬೂದಿ ನೀರು ಸುತ್ತಮುತ್ತ ಹರಡದಂತೆ ಕ್ರಮ ಕೈಗೊಳ್ಳಬೇಕು. ಅಲ್ಲದೇ ಎನ್ಟಿಪಿಸಿ ನೇಮಕಾತಿಗಳಲ್ಲಿ ಸ್ಥಳೀಯ ಸಂತ್ರಸ್ತರ ಮಕ್ಕಳಿಗೆ ಆದ್ಯತೆ ನೀಡಬೇಕು. ಇಲ್ಲವಾದರೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ಎಸಿ ಗುರುನಾಥ ದಡ್ಡೆ ಅವರು ರೈತರು ಹಾಗೂ ಎನ್ಟಿಪಿಸಿ ಅಧಿಕಾರಿಗಳೊಂದಿಗೆ ಹಾರು ಬೂದಿ ಕೆರೆ ಪ್ರದೇಶ ಮತ್ತು ಸುತ್ತಲಿನ ಕೃಷಿಭೂಮಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರೈತರ ಅಹವಾಲುಗಳನ್ನು ಆಲಿಸಿದ ಅವರು, ಹಾರು ಬೂದಿ ನಿಯಂತ್ರಣಕ್ಕೆ ಸಂಬಂಧಿಸಿದ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ರೈತರ ಬೇಡಿಕೆಗಳನ್ನು ಚರ್ಚಿಸಿ ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಶಶಿಕಾಂತ ಬಿರಾದಾರ, ಸುನಿಲ ಹಿರೇಮಠ, ಯಮನೂರು ಬಿಸ್ಟಗೊಂಡ, ಶ್ರೀಶೈಲ ಬಾಡಗಿ, ಸಂಗಣ್ಣ ಗೋಲಗೊಂಡ, ಮಂಜುನಾಥ ಅರಕೇರಿ, ರಾಜುಗೌಡ ಪಾಟೀಲ್, ರಾಜು ತಳವಾರ, ಗ್ಯಾನು ಪಾಟೀಲ ಸೇರಿದಂತೆ ಎನ್ಟಿಪಿಸಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಸ್ವಲ್ಪ ಸಮಯ ಸಿಕ್ಕರೂ ಸಾಕು ಅದು ರಸಮಯ

■ ಉದಯರಶ್ಮಿ ದಿನಪತ್ರಿಕೆ

**ಜಯ್ ನುಡಿ**

**(ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)**





ಮನೆಯ ಮುಂದಿನ ಹೂದೋಟದಲ್ಲಿ ಶತಪಥ ಹಾಕುತ್ತ ಒಂಭತ್ತು ಗಂಟೆಗೆ ರ್‍ತಿನಿ ಅಂದವರು ಒಂಭತ್ತು ಹೊಡೆದು ಅರ್ಧ ತಾಸಾದರೂ ಇನ್ನೂ ಪತ್ತೆ ಇಲ್ಲ ಆಸಾಮಿ ನನ್ನ ಇವತ್ತಿನ ಮುಂದಿನ ಕೆಲಸ ಎಲ್ಲಾ ಉಲ್ಟಾ ಪಲ್ಟಾ ಆಗ್ತಾವ ಪೆಂಡಿಂಗ್ ಉಳಿತಾವ. ಟೈಂ ಸೆನ್ಸ್ ಇಲ್ಲ ಇವರಿಗೆ. ಇಂಥವರನ ನಂಬಿದರ ಉದ್ಧಾರ ಆದಂಗ ಎಂದು ಬಾರದೇ ಇರುವವರಿಗೆ ಸಹಸ್ರ ನಾಮಾರ್ಚನೆಯನ್ನು ವಟ ವಟಿಸುವಿಕೆಯಲ್ಲಿ ಸಲ್ಲಿಸುತ್ತ ನಮ್ಮ ಟೈಮ್‌ನ್ನು ಧಾರಾಳವಾಗಿ ಹಾಳು ಮಾಡೋದು ನಮಗೆ ಗೊತ್ತೇ ಆಗುವುದಿಲ್ಲ.

ಬದುಕಿರುವವರೆಗೆ ಎಲ್ಲವನ್ನೂ ಗಳಿಸಬೇಕು ಅನುಭವಿಸಬೇಕು ಎನ್ನುವ ಹಟ ನಮ್ಮದು. ಸಾಯುವದಕ್ಕೆ ಮುನ್ನ ಒಂದೆರಡು ದೊಡ್ಡ ಬಂಗಲೆ. ಬಂಗಲೆ ಮುಂದೆ ಐದಾರು ಉದ್ದನೆಯ ಕಾರು ಬ್ಯಾಂಕ್‌ನಲ್ಲಿ ಬಿಗ್ ಬ್ಯಾಲನ್ಸ್ ಪದವಿ ಬಿರುದು ಸನ್ಮಾನ ಒಟ್ಟಿನೊಳಗೆ ನಮ್ಮ ಸಿರಿವಂತಿಕೆ ನಾಲ್ಕು ಜನರ ಬಾಯಲ್ಲಿರಬೇಕೆಂದು ಬೆಳಿಗ್ಗೆ ಬೇಗ ಎದ್ದು ರಾತ್ರಿ ಎಷ್ಟು ಹೊತ್ತಾದರೂ ಮನೆ ಸೇರುವುದಿಲ್ಲ. ಏನನ್ನೋ ಗಳಿಸ್ತಿವಿ ಅಂತ ಯಾವುದನ್ನು ಗಳಿಸದೇ ತಡ ರಾತ್ರಿ ಮನೆಗೆ ಬಂದು ಮನೆಯವರ ಮೇಲೆ ವಿನಾಕಾರಣ ಹರಿಹಾಯುವುದನ್ನು ರೂಢಿ ಮಾಡಿಕೊಂಡಿದ್ದೇವೆ.

ನಮ್ಮ ಸುತ್ತ ಮುತ್ತ ಇರುವ ಕೆಲ ಜನರನ್ನು ಸೂಕ್ಷ್ಮವಾಗಿ ನೋಡಿದಾಗ ತಿಳಿದು ಬರುವ ಸಂಗತಿ ಅಂದರೆ ಅವರು ಸಿಕ್ಕ ಒಂದು ನಿಮಿಷವನ್ನೂ ಹಾಳು ಮಾಡುವುದಿಲ್ಲ ಸುಮ್ಮನೆ ಕಳೆಯುವುದಿಲ್ಲ. ಯಾವುದಾದರೂ ಉಪಯುಕ್ತ ಕೆಲಸಗಳಿಗೆ ಉಪಯೋಗಿಸುತ್ತಿರುತ್ತಾರೆ. ಪ್ರತಿಯೊಬ್ಬ ಮನುಷ್ಯನೂ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕಾದ ಅತ್ಯಂತ ಶ್ರೇಷ್ಠ ಗುಣವೆಂದರೆ ಸಿಕ್ಕ ಸಮಯವನ್ನು ಸದುಪಯೋಗಪಡಿಸಿಕೊಳ್ಳುವುದು. ಟೈಂ ಮ್ಯಾನೇಜ್‌ಮೆಂಟ್ ಅನ್ನುವುದು ಒಂದು ಕಲೆ. ದಿನದ ಇಪ್ಪತ್ನಾಲ್ಕು ಗಂಟೆ ಕೆಲಸ ಮಾಡಲು ಆಗುವುದಿಲ್ಲ ಅನ್ನುವುದು ನಿಜವಾದರೂ ಸಿಕ್ಕ ಸಮಯವನ್ನು ಗುಣಾತ್ಮಕವಾಗಿ ಕಳೆಯುವುದೂ ಮುಖ್ಯ. ಸಮಯವನ್ನು ಹಣಕ್ಕೆ ಹೋಲಿಸುತ್ತಾರೆ ಸಮಯ ಹಣಕ್ಕಿಂತ ದೊಡ್ಡದು ಏಕೆಂದರೆ ಹಣವನ್ನು ಕೂಡಿಡಬಹುದು ನಮಗೆ ಬೇಕಾದಾಗ ಉಪಯೋಗಿಸಬಹುದು ಸಮಯ ಹಾಗಲ್ಲ ಇಂದಿನ ಸಮಯವನ್ನು ಇಂದೇ ಬಳಸಬೇಕು. ಕೂಡಿಟ್ಟ ಹಣವನ್ನು ನಮ್ಮ ಮಕ್ಕಳಿಗೆ ಕೊಡಬಹುದು ಆದರೆ ಸಮಯವನ್ನು ಹಾಗೆ ಮಾಡಲು ಬರುವುದಿಲ್ಲ.



ಜೀವನದಲ್ಲಿ ಎಲ್ಲದಕ್ಕಿಂತಲೂ ಮುಖ್ಯ ಸಮಯ. ಜಗತ್ತಿನ ನಂಬರ್ ಒನ್ ಶ್ರೀಮಂತರು ಅದನ್ನು ಕೊಳ್ಳಲು ಸಾಧ್ಯವೇ ಇಲ್ಲ ಹೀಗಾಗಿ ಸಮಯದ ಮೌಲ್ಯ ಅರಿತವರು ಕಛೇರಿಯಲ್ಲಿ ನನ್ನ ಸಮಯ ಅಮೂಲ್ಯ ಎಂಬ ಫಲಕವನ್ನು ಬರೆದು ತಮ್ಮ ಟೇಬಲ್ ಮೇಲೆ ಇಟ್ಟಿರುತ್ತಾರೆ ಅದನ್ನು ನೋಡಿ ಅವರನ್ನು ಭೇಟಿಯಾದವರು ಬಂದ ಕೆಲಸ ಮುಗಿದ ತಕ್ಷಣ ಹೊರಡುತ್ತಾರೆ. ಎಲ್ಲಿ ಹೋಗಬೇಕಾದರೂ ಸರಿಯಾದ ಸಮಯಕ್ಕೆ ತಯಾರಾಗಿರುತ್ತಾರೆ. ತಮ್ಮನ್ನು ಭೇಟಿಯಾಗಲು ಬರುವವರು ಒಂದು ವೇಳೆ ಹತ್ತು ಹದಿನೈದು ನಿಮಿಷ ತಡವಾಗುವ ಮುನ್ಸೂಚನೆ ಸಿಕ್ಕರೆ ಸಾಕು ಅಷ್ಟರಲ್ಲಿ ತಮಗೆ ಕೆಲಸದ ವಿಷಯವಾಗಿ ಮಾತನಾಡಬೇಕಾದವರೊಂದಿಗೆ ಫೋನಿನಲ್ಲಿ ಮಾತನಾಡುತ್ತಾರೆ. ಗೆಳೆಯರ ಮೆಸೇಜ್‌ಗಳಿಗೆ ಉತ್ತರಿಸುತ್ತಾರೆ. ದಿನ ಪತ್ರಿಕೆಯಲ್ಲಿ ತಮಗೆ ಇಷ್ಟವಾದ ಅಂಕಣವನ್ನು ಓದಿ ಮುಗಿಸುತ್ತಾರೆ. ತಲೆಗೆ ಕಸರತ್ತು ಕೊಡುವ ಪದಬಂಧವನ್ನು ತುಂಬುತ್ತಾರೆ ಸುಡೋಕುದಂಥ ಆಟವನ್ನಾಡುತ್ತಾರೆ.

ಕಛೇರಿಯಲ್ಲಿ ನಿಗದಿತ ಸಮಯಕ್ಕೆ ಕಾರ್ಯಕ್ರಮವೊಂದು ಶುರುವಾಗದಿದ್ದರೆ ಸಿಕ್ಕ ಸ್ವಲ್ಪ ಸಮಯದಲ್ಲಿಯೇ ಫೈಲ್‌ಗಳನ್ನು ಜೋಡಿಸಿಟ್ಟುಕೊಳ್ಳುತ್ತಾರೆ. ಅಥವಾ ಇತ್ಯರ್ಥಗೊಳಿಸಬೇಕಾದ ಫೈಲ್ ಮೇಲೆ ಒಂದು ಶೀಘ್ರ ನೋಟ ಹರಿಸುತ್ತಾರೆ. ಮುಂದೆ ಮಾಡಬೇಕಾದ ಕೆಲಸದ ಪಟ್ಟಿಯೊಂದನ್ನು ತಯಾರಿಸಿಕೊಳ್ಳುತ್ತಾರೆ. ಮನೆಯಲ್ಲಿದ್ದರೆ ನಾಳೆಗೆ ಬೇಕಾದ ಬಟ್ಟೆಗಳನ್ನು ಇಸ್ತ್ರಿ ಮಾಡಿಕೊಳ್ಳುತ್ತಾರೆ. ಶೂ ಪಾಲಿಷ್ ಮಾಡಿಟ್ಟುಕೊಳ್ಳುತ್ತಾರೆ. ಕಛೇರಿಗೆ ತೆಗೆದುಕೊಂಡು ಹೋಗಬೇಕಾದ ಅವಶ್ಯಕ ವಸ್ತುಗಳನ್ನು ಜೋಡಿಸಿಟ್ಟುಕೊಳ್ಳುತ್ತಾರೆ. ನೆಂಟರಿಷ್ಟರೊಂದಿಗೆ ಕರೆ ಮಾಡಿ ಮಾತನಾಡುತ್ತಾರೆ. ಟಿವಿಯಲ್ಲಿ ಬರುವ ಹಾಸ್ಯ ಚಟಾಕೆಗಳನ್ನು ನೋಡಿ ನಕ್ಕು ಹಗುರಾಗುತ್ತಾರೆ. ತಮ್ಮ ಪ್ರೊಜೆಕ್ಟ್‌ಗೆ ಬೇಕಾದ ವಿಷಯಗಳನ್ನು ನೆಟ್‌ನಲ್ಲಿ ಸರ್ಚ್ ಮಾಡುತ್ತಾರೆ ಇವೆಲ್ಲ ಚಿಕ್ಕ ಪುಟ್ಟ ಕೆಲಸಗಳು ಅನಿಸುತ್ತವೆ ಆದರೆ ಈ ಕೆಲಸಗಳನ್ನು ಮಾಡಲು ಸಮಯ ಬೇಕೇ ಬೇಕು ತಾನೆ. ಸಿಕ್ಕ ಸ್ವಲ್ಪ ಸಮಯದ ಬಗ್ಗೆ ಉದಾಸೀನತೆ ತೋರಿಸದೇ ಅದನ್ನು ತಮ್ಮ ಚಿಕ್ಕ ಚಿಕ್ಕ ಕೆಲಸಗಳಿಗಾಗಿ ಉಪಯೋಗಿಸುತ್ತಾರೆ ಹೀಗಾಗಿ ಅವರು ಸಮಾಜದಲ್ಲಿ ಉನ್ನತ ಸ್ಥಾನ ಪಡೆಯಲು ಸಾಧ್ಯವಾಗಿದೆ.

ಮತ್ತೊಬ್ಬರಿಗಾಗಿ ಕಾಯುವ ಸಂದರ್ಭ ಬಂದಾಗ ಅವರಿಗಾಗಿ ಅರ್ಧ ತಾಸಿನಷ್ಟು ಸಮಯವೂ ಕಾದು ಕುಳಿತುಕೊಳ್ಳುತ್ತೇವೆ. ಮಾಡಲೇಬೇಕಾದ ಅನಿವಾರ್ಯ ಕೆಲಸವಿದ್ದರೂ ಅಯ್ಯೋ ಅಷ್ಟರಲ್ಲಿ ಆಗುತ್ತೋ ಇಲ್ಲವೋ ಎಂಬ ಅನುಮಾನ ಸೂಚಿಸುತ್ತೇವೆ. ಮಾಡಬಹುದು ಆದರೆ ಆಗಲೆ ರೆಡಿಯಾಗಿ ಬಿಟ್ಟಿದಿನಲ್ಲ ಎಂಬ ಸಬೂಬು ನಮಗೆ ನಾವೇ ಕೊಟ್ಟುಕೊಂಡು ಹೇಗೋ ಕಾಲ ಕಳೆದು ಬಿಡುತ್ತೇವೆ.

ಬಸ್ ಅಥವಾ ರೈಲು ತಡವಾದಾಗ ನಾವು ಅದು ಬರುವವರೆಗೆ



ವ್ಯವಸ್ಥೆ ಎಷ್ಟು ಹಾಳಾಗಿಬಿಟ್ಟಿದೆ ಇಲ್ಲಿ ಸರಿಯಾದ ಸಮಯಕ್ಕೆ ಯಾವುದು ನಡೆಯೋದಿಲ್ಲ ಅಂತ ತಾಸಿಗಿಂತಲೂ ಹೆಚ್ಚಿನ ಸಮಯವನ್ನು ಬೇಡವಾದ ಹುರುಳಿಲ್ಲದ ಮಾತುಕತೆಯಲ್ಲಿ ಕಳೆದುಬಿಡುತ್ತೇವೆ. ನಮಗೆ ಅನೇಕ ಕೆಲಸಗಳನ್ನು ಮಾಡಲು ಸಮಯ ಸಿಕ್ಕರೂ ಅದನ್ನು ಸದುಪಯೋಗಪಡಿಸಿಕೊಳ್ಳದೇ ಹಾಗೆ ಕಳೆದುಬಿಡುತ್ತೇವೆ. ಆದರೆ ಅವರು ಅದೇ ಸಮಯದಲ್ಲಿ ವೇಟಿಂಗ್ ರೂಮಿನಲ್ಲಿ ಕುಳಿತ ಇತರರೊಂದಿಗೆ ಹಿತ ನೀಡುವಂತಹ ಮಾತುಕತೆಯಲ್ಲಿ ತೊಡಗಿಕೊಂಡು ಸಾಹಿತ್ಯ ಸಂಗೀತ ಕ್ರಿಕೆಟ್‌ನಂತ ವಿಷಯಗಳನ್ನು ಚರ್ಚಿಸುತ್ತ ಎದುರಿನವರು ಮಾಡುವ ಕಾರ್ಯ ಕ್ಷೇತ್ರದ ಒಳ ಹೊರಗುಗಳ ಬಗ್ಗೆ ತಿಳಿದುಕೊಳ್ಳುತ್ತಾರೆ. ಸದಭಿರುಚಿಯ ಸಂವಾದದಲ್ಲಿ ತೊಡಗಿಸಿಕೊಂಡು ಅನೇಕ ಸಮಸ್ಯೆಗಳಿಗೆ ತಮ್ಮ ತಾರ್ಕಿಕ ಮಟ್ಟದಲ್ಲಿ ಪರಿಹಾರ ಸೂಚಿಸುತ್ತಾರೆ.ಇಲ್ಲವೇ ನಿಲ್ದಾಣದದಲ್ಲಿರುವ ಬುಕ್ ಸ್ಟಾಲ್‌ಗೆ ಹೊಗಿ ತಮಗೆ ಇಷ್ಟವಾದ ಪುಸ್ತಕ ಅಥವಾ ಮ್ಯಾಗಜಿನ್‌ವೊಂದನ್ನು ಕೊಂಡು ತಂದು ಓದುತ್ತಾರೆ. ಮಜ್ಜಿಗೆ ಎಳೆನೀರನ್ನು ಕುಡಿದು ಚೈತನ್ಯ ತುಂಬಿಕೊಳ್ಳುತ್ತಾರೆ. ಹೀಗೆ ಸಿಕ್ಕ ಸ್ವಲ್ಪ ಸಮಯವನ್ನು ತಮ್ಮ ಬೆಳವಣಿಗೆಗೆ ಬಳಸಿಕೊಳ್ಳುತ್ತಾರೆ.

ನಾವು ಇತರರ ಹೆಸರಿನಲ್ಲಿ ದಿನವೊಂದಕ್ಕೆ ಏನಿಲ್ಲವೆಂದರೂ ಎರಡು ಮೂರು ತಾಸು ಸಮಯವನ್ನು ವ್ಯರ್ಥಗೊಳಿಸುತ್ತೇವೆ. ಅದರ ಬಗ್ಗೆ ನಮಗೆ ಅರಿವೇ ಇರುವುದಿಲ್ಲ ಕಾಯುವ ಸಮಯದಲ್ಲಿ ನಮ್ಮ ಮನಸ್ಥಿತಿಯೂ ತುಂಬಾ ಒತ್ತಡವನ್ನೂ ಅನುಭವಿಸಿರುತ್ತದೆ. ಎಂದು ಬೇರೆ ಹೇಳಬೇಕಿಲ್ಲ. ಆದರೆ ಸಮಯಕ್ಕೆ ಬೆಲೆ ಕೊಡುವವರು ಒಂದೇ ಒಂದು ನಿಮಿಷವನ್ನೂ ವ್ಯರ್ಥವಾಗಿ ಕಳೆಯುವುದಿಲ್ಲ. ಆದ್ದರಿಂದಲೇ ಅವರು ಸಾಧಕರೆನಿಸಿಕೊಳ್ಳುತ್ತಾರೆ ನಮಗಿಂತ ಎತ್ತರ ಸ್ಥಾನದಲ್ಲಿರುತ್ತಾರೆ. ಅವರಿಗೆ ಫ್ರೀಯಾಗಿರೋಕೆ ಸಮಯವಿರುವುದಿಲ್ಲವೆಂದರೂ ಎಲ್ಲವನ್ನೂ ಎಷ್ಟು ಚೆನ್ನಾಗಿ ನಿಭಾಯಿಸುತ್ತಾರೆ. ಕಾರಣ ಅವರು ಸಿಕ್ಕ ಪ್ರತಿ ನಿಮಿಷವನ್ನೂ ಚಾಣಾಕ್ಷತನದಿಂದ ತಮ್ಮ ಗೆಲುವಿಗಾಗಿ ಬಳಸಿಕೊಳ್ಳುತ್ತಾರೆ. ನಾವು ಸಿಕ್ಕ ಸಮಯವನ್ನು ಸಿಕ್ಕ ಸಿಕ್ಕ ಹಾಗೆ ಸಿಕ್ಕವರೊಂದಿಗೆ ಕಳೆಯುತ್ತಿರುವುದರಿಂದ ಯಾವುದಕ್ಕೂ ಪುರುಸೊತ್ತಿಲ್ಲ ಸಮಯ ಸಿಗುತ್ತಿಲ್ಲ ಎಂದು ದೂರು ಹೇಳುತ್ತಿರುತ್ತೇವೆ. ಇನ್ಮೇಲೆ ಹೀಗೆ ಸಮಯದ ಬಗ್ಗೆ ಕಂಪ್ಲೇಂಟ್ ಹೇಳುತ್ತ ಸಮಯವನ್ನು ವ್ಯರ್ಥ ಕಳೆಯುವದರ ಬದಲು ನಾವೂ ಸಹ ಅವರು ನಡೆಯುತ್ತಿರುವ ದಾರಿಯನ್ನು ಅನುಸರಿಸುವುದು ಒಳ್ಳೆಯದಲ್ಲವೇ?

ಲೇಖಕಿ
■ ಜಯಶ್ರೀ.ಜೆ. ಅಬ್ಬಿಗೇರಿ
ಆಂಗ್ಲ ಭಾಷಾ ಉಪನ್ಯಾಸಕರು
ಬೆಳಗಾವಿ
ಮೊ: 9449234142



## ಡಾ.ಕೈಲಾಸನಾಥ ಶ್ರೀಗೆ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ದ ಯುನೈಟೆಡ್ ರಾಷ್ಟ್ರ ಸೇವಾ ಫೌಂಡೇಶನ್ ಕರ್ನಾಟಕ ಹಾಗೂ ಶ್ರೀ ಕ್ಷೇತ್ರ ಧರ್ಮದ್ವಜ ಪ್ರತಿಷ್ಠಾನ, ಬೆಂಗಳೂರು ವತಿಯಿಂದ 2025-26ನೇ ಸಾಲಿನ "ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ" ಪಟ್ಟಣದ ಶೀಲವಂತ ಹಿರೇಮಠದ ಡಾ. ಕೈಲಾಸನಾಥ ಮಹಾಸ್ವಾಮಿಗಳಿಗೆ ಲಭಿಸಿದೆ.

ಪ್ರಶಸ್ತಿಯು ರೂ.25 ಸಾವಿರ ನಗದು ಸಹಿತ ಗೌರವಪೂರಿತ ಪುರಸ್ಕಾರವನ್ನು ಒಳಗೊಂಡಿದ್ದು, ಏಪ್ರಿಲ್ 5ರಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಪ್ರದಾನವಾಗಲಿದೆ. ಪೂಜ್ಯರ ಆಧ್ಯಾತ್ಮಿಕ, ಧಾರ್ಮಿಕ ಹಾಗೂ ಸಾಮಾಜಿಕ ಸೇವೆಯನ್ನು ಪರಿಗಣಿಸಿ ಪ್ರಶಸ್ತಿ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ಗುರುಹಿರಿಯರು, ಭಕ್ತರು ಹಾಗೂ ಶಿಷ್ಯರು ಹರ್ಷ ವ್ಯಕ್ತಪಡಿಸಿದ್ದಾರೆ.

## ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರಕ್ಕೆ ಜಮೀನು ನಿಗದಿ

ಬೀದರ್, : ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಮತ್ತು ಸಾಂಸ್ಕೃತಿಕ ಭವನಕ್ಕಾಗಿ ತಾಲ್ಲೂಕು ಆಡಳಿತವು ತಾಲ್ಲೂಕಿನ ಅತಿವಾಳದಲ್ಲಿ ಜಮೀನು ಕಾಯ್ದಿರಿಸಿದೆ. ಒಟ್ಟು 9 ಎಕರೆ 36 ಗುಂಟೆ ಜಮೀನು ಕಾಯ್ದಿರಿಸಿ ಆದೇಶ ಹೊರಡಿಸಲಾಗಿದೆ ಎಂದು ತಹಸಿಲ್ದಾರ್ ರವೀಂದ್ರ ದಾಮಾ ಅವರು ತಿಳಿಸಿದ್ದಾರೆ. ಅತಿವಾಳದಲ್ಲಿ ಜಿಲ್ಲಾಮಟ್ಟದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ, ಸಾಂಸ್ಕೃತಿಕ ಭವನ, ಬುದ್ಧ ವಿಹಾರ ಹಾಗೂ ಉದ್ಯಾನಕ್ಕೆ 10 ಎಕರೆ ಜಮೀನು ಮಂಜೂರು ಮಾಡುವಂತೆ ದಿ ಬುದ್ಧ ಯುತ್ ಕ್ಲಬ್ ವತಿಯಿಂದ ತಹಸಿಲ್ದಾರರಿಗೆ ಮನವಿ ಪತ್ರ ಸಲ್ಲಿಸಲಾಗಿತ್ತು.

# ಕಾಲಾಯ ತಸ್ಮೈ ನಮಃ

■ ಉದಯರಶ್ಮಿ ದಿನಪತ್ರಿಕೆ

**ಭಾವರಶ್ಮಿ**



ಆಮಂತ್ರಣವಿದ್ದ ಕಾರ್ಯಕ್ರಮದಲ್ಲಿ ಹೋಗಿ ಕುಳಿತಿರುವಾಗ, ನಡೆಯಲಾರದೆ ಊರುಗೋಲಿನ ಸಹಾಯದಿಂದ ನಡೆದು ಒಳಬಂದ ಮಹಿಳೆಯ ಕಡೆಗೆ ನನ್ನ ಕಣ್ಣು ಹರಿಯದೆ ಇರಲಿಲ್ಲ. ದೊಡ್ಡದೊಂದು ಮೈಸೂರು ಸಿಲ್ಕ್ ಸೀರೆ, ಅದಕ್ಕೊಪ್ಪುವ ಕುಪ್ಪಸ, ಕಾಸ್ಟ್ಲಿ ಪುಟಾಣಿ ಬ್ಯಾಗೂ, ದೊಡ್ಡದೊಂದು ಚಿನ್ನದ ಬಳೇ.. ಎಲ್ಲವೂ ಇದೆ. ಆದರೆ ಆಕೆಯ ದಡೂತಿ ದೇಹದ ಭಾರವನ್ನು ಆಕೆಯ ಕಾಲು ಭರಿಸಲಾಗುತ್ತಿಲ್ಲ. 'ವಾಕಿಂಗ್ ಸ್ಟಿಕ್' ಆಕೆಯ ಕಾಲಿನ ಸಂಗಾತಿಯಾಗಿ ನಡೆಸುತ್ತಿದೆ. 'ಇಷ್ಟು ಚಿಕ್ಕ ಕಾರ್ಯಕ್ರಮಕ್ಕೆ ಇಷ್ಟೊಂದು ಆಡಂಬರ ಬೇಕಿತ್ತಾ? ಅನ್ನಿಸಿತು ನನಗೆ. ತಕ್ಷಣವೆ 'ಹಣವಂತರು. ಪಾಪ! ಇರುವ ಹಣದ ಸದ್ವಿನಿಯೋಗ ಮಾಡಿಕೊಳ್ಳಲೇಬೇಕಲ್ಲಾ.. ಜೊತೆಗೆ ಪ್ರತಿಷ್ಠೆಯ ಪ್ರಶ್ನೆ ಬೇರೆ' ಎಂದುಕೊಂಡವಳೇ ಸುಮ್ಮನಾದೆ. ವಿಷಯ ಅಷ್ಟೇ ಅಲ್ಲ. ಅದು ನಾ ಮೊದಲೇ ಯಾವಾಗಲೋ ನೋಡಿದ್ದ ಮುಖ.



**ಹೌದು ಇದು ಅದೇ ಮುಖ.**

**ನಾ ಚಿಕ್ಕವಳಿದ್ದಾಗ ನೋಡಿದ್ದ ಮುಖ.**

ಬೀಗರ ಔತಣಕ್ಕೆ ಇನ್ವಿಟೇಶನ್ ಕೊಟ್ಟು ಕರೆದಿದ್ದರು. ಟೀಚರ್ ಆಗಿದ್ದ ಅಂಟಿಗೆ ರಜಾ ಇಲ್ಲದ ಕಾರಣ, ರಜೆಗೆಂದು ಅವರ ಮನೆಗೆ ಬಂದಿದ್ದ ನನ್ನನ್ನು ಅವರ ಮಗನ ಜೊತೆಯಲ್ಲಿ ಕಳಿಸಿದರು.

ನಾವಿಬ್ಬರು ಅಲ್ಲಿ ಹೋಗಿ ಆಟೋ ಇಳಿದಾಗ, "ಏ ಇವಳು ಸಾವಿತ್ರಿ ಮಗಳಲ್ವಾ?" ಎಂದು ಒಬ್ಬರ ಧ್ವನಿ, "ನಾವು ಸಾವಿತ್ರೀನ ಕರೆದೇ ಇಲ್ಲ ಆದ್ರೂ ಬಂದಿದೆ" ಎಂದು ಇನ್ನೊಂದು ಧ್ವನಿ ಮಹಿಳೆಯರ ಗುಂಪಿನಿಂದ ಕೇಳಿಬಂತು. ನಾನು ಅವಾಗಿನ್ನೂ ಸ್ಕೂಲು ಹುಡುಗಿ. ನನ್ನ ತಮ್ಮನಿಗೆ ಏನೂ ಅರ್ಥವಾಗಲಿಲ್ಲ. ಆದರೆ ನನಗಾಯಿತು. ನಾನು ಏನನ್ನೂ ತಿನ್ನಲಿಲ್ಲ. ತಮ್ಮನ ಊಟವಾದ ನಂತರ ಮೌನವಾಗಿ ಹಿಂತಿರುಗಿದ್ದೆ.

ಇಂದು ತುಂಬಾ ಪ್ರೀತಿಯಿಂದ ಮಾತನಾಡಿಸುತ್ತಿರುವ ಈಕೆಗೆ ಅದು ನೆನಪಿಲ್ಲ. ಆದರೆ ನನಗಿದೆ. ಇಂದು ಉತ್ಕಟ ಪ್ರೀತಿಯಿಂದ ನನ್ನನ್ನು ಆಧರಿಸುತ್ತಿರುವ ಆಕೆಯ ಕಣ್ಣಲ್ಲಿ ನಾ ಅವರೊಡನೆ ಮತ್ತಷ್ಟು ಹೊತ್ತು ಇರಬೇಕೆಂಬ ವಿನಂತಿಯಿತ್ತು. ನನ್ನ ಮುಖದಲ್ಲಿ ನಗುವಿತ್ತು.

'ಅಂದು ನನಗೆ ಬಲವಿರಲಿಲ್ಲ ಅವರು ಹಂಗಿಸಿದರು, ಇಂದು ಅವರಿಗೆ ಬಲವಿಲ್ಲ ನಾ ಪ್ರೀತಿಸಬೇಕು' ಎಂದುಕೊಂಡೆ.

ಕಾಲಚಕ್ರದಲ್ಲಿ ಯಾರ ಬದುಕು ಯಾವಾಗ ಹೇಗೆ ಬೇಕಾದರು ಬದಲಾಗಬಹುದು. ಒಂದೊಂದು ಕ್ಷಣವೂ ಸಹ ನಮ್ಮ ಕೈಯಲ್ಲಿರುವುದಿಲ್ಲ. ಮುಂದಿನ ಘಳಿಗೆ ಏನಾಗಬಹುದೆಂಬುದನ್ನು ಎಷ್ಟೇ ದೊಡ್ಡ ಮನುಷ್ಯರಾದರು ಯಾರೂ ಊಹಿಸಲಾರರು. ಕಣ್ಣಿಗೆ ಕಾಣದ ಅಗೋಚರ ಶಕ್ತಿಯೊಂದು ಇಡೀ ಜಗತ್ತನ್ನು ನಿಯಂತ್ರಿಸಿ ತಾನೇ ಆಳುತ್ತಿರುವಾಗ ಮನುಷ್ಯ 'ಯಕಶ್ಚಿತ್' ಎಂದಾಯಿತಲ್ಲವೇ? ಅಂದಮೇಲೆ ನಾವೇ ಹೆಚ್ಚೆಂದು ಹೇಗೆ ಹೇಳಲಾದೀತು.

ಬಹುಜನರ ಬಾಯಿಯಲ್ಲಿ 'ನಾನು ನಾನು'ಗಳೇ ನಲಿದಾಡುತ್ತವೆ. 'ನಾನು' ಮಾಡಿದ ಕೆಲಸ ಮಾತ್ರ 'ನಾನೇ' ಇರಲಿ. ಆದರೆ ತಂಡ ಮಾಡಿದ ಕೆಲಸವಾದರೆ ಅದು 'ನಾವು' ಆಗಬಹುದಲ್ಲವೆ? ಅವಾಗ ಆ ಮಾತಿಗೆ ಅದೆಷ್ಟು ತೂಕ ಹೆಚ್ಚಾಗಬಹುದು. ಇಂದು ಆಳುತ್ತಿರುವ 'ನಾನು' ನಾಳೆ ಆಳಿಸಿಕೊಳ್ಳುವ ಸ್ಥಿತಿ ಕೂಡಾ ತಲುಪಬಹುದು ಅಥವಾ ಯಾರನ್ನೋ ಆಳುತ್ತಿರುವ 'ನಾನು' ಮತ್ಯಾರಿಂದಲೋ ಆಳಿಸುಕೊಳ್ಳುತ್ತಿರುವವಳೆ/ನೆ ಆಗಿದ್ದೇನೆ ಎಂಬುದು ಗಮನಕ್ಕೆ ಇರಬೇಕಾದದ್ದು ಅತ್ಯಾವಶ್ಯಕ.

**ಕಾಲನ ಕೈಯಲ್ಲಿ ಎಲ್ಲರೂ ಗೊಂಬೆಗಳೆ.**



ಲೇಖಕ
■ ರಶ್ಮಿ ಕೆ. ವಿಶ್ವನಾಥ್
ಮೈಸೂರು



# ಬಿಳಿಜೋಳ ಮತ್ತು ಕಣಿಕೆಗೆ ಹೆಚ್ಚಿದ ಬೇಡಿಕೆ : ಸಾಗಣೆ ಜೋರು

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್ ಇಟ್ಟಿ



ಜಮಖಂಡಿ: ಬಾಗಲಕೋಟೆ ಜಿಲ್ಲೆಯಲ್ಲಿ ಕಳೆದ ಎರಡ್ಮೂರು ತಿಂಗಳು ಕಬ್ಬಿನ ಟ್ರ್ಯಾಕ್ಟರ್ ಗಳ ಓಡಾಟ ಜೋರಾಗಿತ್ತು ಆದ್ರೆ ಈಗ ಕಾರ್ಖಾನೆಗಳೆಲ್ಲ ಬಂದಾಗಿ ಕಬ್ಬಿನ ಟ್ರ್ಯಾಕ್ಟರ್ ಗಳ ಓಡಾಟ ಬಂದಾಗಿದ್ದು ಸಧ್ಯ ಎಲ್ಲೆಡೆ ಜೋಳದ ಕಣಿಕೆ ಹೊತ್ತ ಟ್ರ್ಯಾಕ್ಟರ್‌ಗಳ ಓಡಾಟ ಹೆಚ್ಚಾಗಿದೆ. ಕಬ್ಬಿನ ಟ್ರ್ಯಾಕ್ಟರ್‌ಗಳು ಸಕ್ಕರೆ ಕಾರ್ಖಾನೆಗಳತ್ತ ಮುಖಮಾಡುತ್ತಿದ್ದವು, ಕಣಿಕೆ ಹೊತ್ತ ವಾಹನಗಳು ಒಣಬೇಸಾಯ ಪ್ರದೇಶಗಳಿಂದ ಕಬ್ಬು ಬೆಳೆ ಪ್ರದೇಶಗಳತ್ತ ಹೋಗುತ್ತಿವೆ.

ನೆರೆ ರಾಜ್ಯಕ್ಕೂ ಸಾಗಣೆ : ಬಾಗಲಕೋಟೆ ಹುನಗುಂದ, ಬಾದಾಮಿ ಮತ್ತು ವಿಜಯಪೂರ ಜಿಲ್ಲೆಯ ಬಹುತೇಕ ತಾಲೂಕುಗಳ ಭಾಗದಲ್ಲಿ ಬೆಳೆದ ಬಿಳಿಜೋಳದ ಕಣಿಕೆ ಬೀಳಗಿ, ಮುಧೋಳ ಮತ್ತು ಜಮಖಂಡಿ ತಾಲೂಕಿನ ಗ್ರಾಮಗಳಿಗೆ ಬರುತ್ತಿದೆ. ಅಷ್ಟಾದರೆ ಪರವಾಗಿಲ್ಲ. ಬಾಗಲಕೋಟೆ ಮತ್ತು ವಿಜಯಪೂರ ಜಿಲ್ಲೆಯ ಕಣಿಕೆ ಅಕ್ಕಪಕ್ಕದ ಜಿಲ್ಲೆ ಮತ್ತು ನೆರೆಯ ಮಹಾರಾಷ್ಟಕ್ಕೂ ಸಾಗಣೆ ಆಗುತ್ತಿದೆ. ರಾಜ್ಯ ಹೆದ್ದಾರಿಗಳ ಮೇಲೆ ಕಣಿಕೆ ಸಾಗಣೆ ಜೋರಾಗಿದೆ. ಟ್ರ್ಯಾಕ್ಟರ್ ಟೇಲರ್ ಲಾರಿ- ಚಕ್ಕಡಿಯಲ್ಲೂ ಕಣಿಕೆ ಸಾಗಣೆ ದೃಶ್ಯ ಕಾಣಬಹುದಾಗಿದೆ.

> **"ನಮ್ಮ ಭಾಗದಲ್ಲಿ ಇಲ್ಲಿಯವರೆಗೂ ಕಬ್ಬು ಕಟಾವು ಜೋರಾಗಿತ್ತು ಅದರಿಂದ ಕಬ್ಬಿನ ಮೇಲಿನ ಹಸಿರು ಮೇವು ಸಿಗುತ್ತಿತ್ತು ಆದರೆ ಬೀರು ಬೆಸಿಗೆಯ ಪರಿಣಾಮ ಮುಂಬರುವ ದಿನಗಳಲ್ಲಿ ಮೇವಿನ ಕೊರತೆ ಆಗಬಾರದೆಂಬ ಮುನ್ನೆಚ್ಚರಿಕೆಯಿಂದ ದೂರದ ಜೋಳದ ಕಣಿಕೆ ಕರಿದಿಸುತ್ತಿದ್ದೇವೆ."**
>
> **■ ಸಂಗಮೇಶ ಕೋಹಳ್ಳ**
> **ಆಲಗೂರ ಗ್ರಾಮದ ಯುವ ರೈತ**

ಹೆಚ್ಚಿದ ಬೇಡಿಕೆ: ಬಾಗಲಕೋಟೆ ಜಿಲ್ಲೆಯ ಮುಧೋಳ, ಬೀಳಗಿ ಹಾಗೂ ಜಮಖಂಡಿ ತಾಲೂಕುಗಳಲ್ಲಿನ ರೈತರು ಹೆಚ್ಚಾಗಿ ಕಬ್ಬನ್ನೇ ಬೆಳೆಯುತ್ತಿರುವುದರಿಂದ ಜಾನುವಾರುಗಳಿಗೆ ಅಗತ್ಯವಾಗಿ ಬೇಕಿರುವ ಬಿಳಿಜೋಳ ಕಣಿಕೆಯನ್ನು ಒಣಬೇಸಾಯ ಪ್ರದೇಶದಿಂದಲೇ ಪಡೆದುಕೊಳ್ಳಬೇಕಾಗಿದೆ. ಜಾನುವಾರುಗಳಿಗೆ ಹಸಿರು ಹುಲ್ಲು ಈ ಪ್ರದೇಶದಲ್ಲಿ ಸಾಕಷ್ಟು ಲಭ್ಯವಿದ್ದರೂ ಜೋಳದ ಕಣಿಕೆಯ ಅಗತ್ಯವೂ ಸಾಕಷ್ಟಿದೆ. ಹಾಗಾಗಿ ಈ ಭಾಗದಲ್ಲಿನ ರೈತರು ಕಣಿಕೆ ಖರೀದಿಸುವ ಅನಿವಾರ್ಯತೆ ಸೃಷ್ಟಿಯಾಗಿದೆ.

7-10 ಸಾವಿರ ರೂಪಾಯಿ : ಜೋಳ ಬೆಳೆಯುವ ಪ್ರದೇಶ ವರ್ಷದಿಂದ ವರ್ಷಕ್ಕೆ ಕಡಿಮೆ ಆಗಿ ನೀರಾವರಿ ವ್ಯಾಪ್ತಿ ಹೆಚ್ಚುತ್ತಿದೆ. ಪರಿಣಾಮವಾಗಿ ಬಿಳಿಜೋಳ ಮತ್ತು ಕಣಿಕೆ ಎಲ್ಲಿಲ್ಲದ ಬೇಡಿಕೆ ಪಡೆದುಕೊಂಡಿವೆ.

ಪಕ್ಕದ ವಿಜಯಪೂರ ಜಿಲ್ಲೆಯ ಬಬಲೇಶ್ವರ ತಾಲೂಕಿನ ನಾನಾ ಹಳ್ಳಿಗಳ ಭಾಗದ ಜೋಳದ ಕಣಿಕೆಗೆ ಎಲ್ಲಿಲ್ಲದ ಬೇಡಿಕೆ ಇದೆ.

ಇಲ್ಲಿನ ಕಣಿಕೆಯ ರುಚಿ ಇತರ ಭಾಗಗಗಳಿಗಿಂತ ಚೆನ್ನಾಗಿರುತ್ತದೆ ಎನ್ನುವುದು ರೈತರ ಅಭಿಪ್ರಾಯವಾಗಿದೆ. ಹಾಗಾಗಿ ಇಲ್ಲಿನ ಪ್ರತಿ ಟ್ರ್ಯಾಕ್ಟರ್ ಕಣಿಕೆ 7 ಸಾವಿರದಿಂದ 10 ಸಾವಿರ ರೂಪಾಯಿಗಳಿದ್ದು, ಒಂದು ಚಕ್ಕಡಿಗೆ ಕನಿಷ್ಠ 2500 ರಿಂದ 3 ಸಾವಿರ ರೂಪಾಯಿ ಇದೆ. 5 ಮಾರು ಉದ್ದ ಮತ್ತು 2 ಮಾರು ಅಗಲದ ಬಣಿವೆಗಳಿಗೆ 25 ಸಾವಿರದಿಂದ 30 ಸಾವಿರಗಳವರೆಗೆ ಬೆಲೆ ಇದೆ. ಆಗಸ್ಟ ವೇಳೆಗೆ ಈ ಬೆಲೆ 40ರಿಂದ 50 ಸಾವಿರ ರೂ.ಗಳ ವರೆಗೂ ತಲುಪಲಿದೆ ಎನ್ನುವುದು ರೈತರ ನಿರೀಕ್ಷೆ.

### ನೀರಾವರಿ ಹೆಚ್ಚಳ ಪರಿಣಾಮ

**ಮಾರುಕಟ್ಟೆಯಲ್ಲಿ ಜೋಳ ಸಿಕ್ಕರೂ ಅದರ ಕಣಿಕೆ ಸಿಗುವುದು ಕಷ್ಟವಾಗಿದೆ. ಜೋಳ ಬೆಳೆಯುವ ಬಹುತೇಕ ರೈತರು ತಮ್ಮ ಜಾನುವಾರುಗಳಿಗಾಗಿಯೇ ಕಣಿಕೆ ಬೇಕಾಗುತ್ತದೆ ಎಂದು ಬಣಿವೆ ಒಟ್ಟುತ್ತಾರೆ. ಹೆಚ್ಚಾದ ಕಣಿಕೆಯನ್ನು ಮಾತ್ರ ಮಾರಾಟ ಮಾಡುತ್ತಾರೆ. ಹಾಗಾಗಿ ಬಿಳಿಜೋಳದ ಕಣಿಕೆಗೆ ಎಲ್ಲಿಲ್ಲದ ಬೇಡಿಕೆ ಬಂದಿದೆ. ಇಂತಹುದೇ ಸ್ಥಿತಿ ಉತ್ತರ ಕರ್ನಾಟಕದ ಇತರ ಭಾಗಗಳಲ್ಲೂ ಇದೆ. ಕಾರಣವಿಷ್ಟೇ ರೈತರು ಒಣಬೇಸಾಯ ಬಿಟ್ಟು ನೀರಾವರಿಯತ್ತ ಚಿತ್ತ ಹರಿಸಿದ್ದರ ಫಲವಾಗಿ ನೀರಾವರಿ ಪ್ರದೇಶದ ರೈತರು ಕಣಿಕೆಗಾಗಿ ಪರದಾಡಬೇಕಾಗಿದೆ.**



# ಯತ್ನಾಳ ಆಪ್ತ ನಂದು ಗಡಗಿ ಬಿಜೆಪಿ ಸೇರ್ಪಡೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರ ಶಾಸಕ ಬಸನಗೌಡ ಪಾಟೀಲ್ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ಯುವ ಮುಖಂಡ ನಂದು ಗಡಗಿ ಅವರು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ವಿಜಯೆಂದ್ರ ಅವರ ನಾಯಕತ್ವವನ್ನ ಒಪ್ಪಿಕೊಂಡು ಹಾಗೂ ಮಾಜಿ ಸಚಿವ ಅಪ್ಪಾಸಾಹೇಬ್ ಪಟ್ಟಣಶೆಟ್ಟಿ ಹಾಗೂ ವಿಜಯಪುರ ನಗರ ಮಂಡಲ ಅಧ್ಯಕ್ಷರಾದ ಸಂದೀಪ್ ಪಾಟೀಲ್ ಸಮ್ಮುಖದಲ್ಲಿ ಬಾಗಲಕೋಟೆ ಬಿಜೆಪಿ ಕಾರ್ಯಾಲಯದಲ್ಲಿ ಬಿಜೆಪಿ ಪಕ್ಷಕ್ಕೆ ಅಧಿಕೃತವಾಗಿ ಸೇರ್ಪಡೆಗೊಂಡಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮೊದಲಾದ ಹಿರಿಯ ನಾಯಕರು ಪಕ್ಷದ ಧ್ವಜ ನೀಡಿ ಪಕ್ಷಕ್ಕೆ ಬರ ಮಾಡಿಕೊಂಡರು.

ದೇಶದ ಪ್ರಧಾನಿ ಮೋದಿ ಅವರ ನಾಯಕತ್ವ ಹಾಗೂ ವಿಜಯೆಂದ್ರ ಅವರ ನಾಯಕತ್ವ ಹಾಗೂ ತತ್ವ ಸಿದ್ದಾಂತಗಳನ್ನು ಮೆಚ್ಚಿ ಪಕ್ಷಕ್ಕೆ ಬಂದಿದ್ದೇನೆ. ಜಿಲ್ಲೆಯಲ್ಲಿ ಪಕ್ಷದ ಬೆಳೆವಣಿಗೆಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ನಂದು ಗಡಗಿ ತಿಳಿಸಿದರು.

# ಸರ್ಕಾರಿ ಶಾಲೆಗೆ ಖಾಸಗಿ ಕಂಪನಿ 10 ಲಕ್ಷ ರೂ. ಪೀಠೋಪಕರಣ ದೇಣಿಗೆ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಖಾಸಗಿ ಕಂಪನಿಗಳು ಪೀಠೋಪಕರಣಗಳಂತ ದೇಣಿಗೆ ನೀಡಿದರೆ ಶಾಲೆಗಳು ಪ್ರಗತಿ ಹೊಂದುತ್ತವೆ ಎಂದು ಶಾಸಕ ಅಶೋಕ್ ಮನಗೂಳಿ ಹೇಳಿದರು.

ಅವರು ಕೋರಮಂಡಲ್ ಇಂಟರ್ನ್ಯಾಷನಲ್ ಲಿಮಿಟೆಡ್‌ಕಂಪನಿಯುಸಿಎಸ್‌ಆರ್‌ಯೋಜನೆಯಡಿಯಲ್ಲಿ ತಾಲೂಕಿನ ಹೂವಿನಹಳ್ಳಿ ಗ್ರಾಮದ ಸರ್ಕಾರಿ ಶಾಲೆಗೆ ಸುಮಾರು 10 ಲಕ್ಷ ವೆಚ್ಚದ ಪೀಠೋಪಕರಣಗಳ ವಿತರಣೆ ಹಾಗೂ ಕಬ್ಬು ಬೆಳೆಗಾರರ ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ಹೇಳಿದರು.

ಖಾಸಗಿ ಕಂಪನಿಗಳು ಗ್ರಾಮೀಣ ಭಾಗದ ಶಾಲೆಗಳ ಅಭಿವೃದ್ಧಿ ಜೊತೆಗೆ ರೈತರ ಬೆಳೆಗಳ ಮಾಹಿತಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿರುವುದು ಅತ್ಯಂತ ಉಪಯುಕ್ತವಾಗಿದೆ ಎಂದರು.

ಯಾವುದೇ ಖಾಸಗಿ ಕಂಪನಿಗಳು ರೈತರಿಗೋಸ್ಕರ ಹಮ್ಮಿಕೊಂಡ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಪಾಲ್ಗೊಂಡು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾರಾಪುರ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಸಂಗಯ್ಯ ಸ್ವಾಮಿ ಹಿರೇಮಠ, ಮಾಜಿ ಜಿಲ್ಲಾ ಪಂಚಾಯತಿ ಉಪಾಧ್ಯಕ್ಷ ಸಿದ್ದರಾಮ ಪಾಟೀಲ, ಕೋರಮಂಡಲ್ ಕಂಪನಿಯ ರಾಜ್ಯ ಮುಖ್ಯ ವ್ಯವಸ್ಥಾಪಕ ಶಿವನಗೌಡ ಪಾಟೀಲ್, ಬೆಂಗಳೂರು ಹಿರಿಯ ವಲಯ ವ್ಯವಸ್ಥೆ ರಂಜಿತ್ ಕುಮಾರ್ ಶೆಟ್ಟಿ, ಅಬ್ದುಲ್ ರಜಾಕ್, ಸಹಾಯಕ ಕೃಷಿ ಅಧಿಕಾರಿ ಪ್ರಶಾಂತ್ ಶಾಣಿ, ಅಲಮೇಲ ರೈತ ಸಂಪರ ಕೇಂದ್ರದ ಅಧಿಕಾರಿ ಅನಿಲ ದಶವಂತ, ಪಶುಸಂಗೋಪನಾಧಿಕಾರಿ ಶಿವನಗೌಡ ಯಲಗೊಂಡ, ಕೋರಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಪ್ರಕಾಶ ಪಾಟೀಲ, ಎಪಿಎಂಸಿ ಅಧ್ಯಕ್ಷ ಬಸು ಬಾಗೇವಾಡಿ, ಶ್ರೀಶೈಲ್ ಪೂಜಾರಿ, ಹಾಗೂ ಶಾಲೆಯ ಶಿಕ್ಷಕರು ಎಸ್ ಡಿ ಎಂ ಸಿ ಅಧ್ಯಕ್ಷರು, ಸದಸ್ಯರು ಗ್ರಾಮಸ್ಥರು ಉಪಸ್ಥಿತರಿದ್ದರು.



# ಚಿದಂಬರ ಸೇವಾ ಸಮಿತಿಯಿಂದ ಹನುಮಾನ ಜಯಂತಿ ಆಚರಣೆ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಪಟ್ಟಣದ ವಿಠ್ಠಲ ಮಂದಿರದಲ್ಲಿ ಚಿದಂಬರ ಸೇವಾ ಸಮಿತಿಯಿಂದ ಹನುಮಾನ ಜಯಂತಿಯನ್ನು ಭಕ್ತಿ ಭಾವದೊಂದಿಗೆ ಆಚರಿಸಲಾಯಿತು.

ಬುಧವಾರ ಬೆಳಿಗ್ಗೆ ಹನುಮಾನ ಜಯಂತಿ ನಿಮಿತ್ಯ ಚಿದಂಬರ ಸೇವಾ ಸಮಿತಿಯ ಪದಾಧಿಕಾ-ರಿಗಳು ಸೇರಿ ವಿವಿಧ ಹೂವು, ಹಾರ, ತಳಿರು ತೋರಣಗಳಿಂದ ಸಿಂಗರಿಸಿ ಹನುಮಾನ ಜಯಂತಿಗೆ ಚಾಲನೆ ನೀಡಿದರು. ಶ್ರೀಪಾದಭಟ್ ಹಾಗೂ ಅಶೋಕಭಟ್ ಜೋಷಿ ನೇತೃತ್ವದಲ್ಲಿ ಪಂಚಾಮೃತದೊಂದಿಗೆ ಅಭಿಷೇಕಗೈದು, ಅಷ್ಟೋತ್ತರ ಸಹಿತ ಎಲ್ಲ ವಿಧಿವಿಧಾನಗಳನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿ ಭಕ್ತಿ ಸಮರ್ಪಿಸಲಾಯಿತು. ತದನಂತರ ಮಹಿಳೆಯರೆಲ್ಲ ಸೇರಿ ಬಾಲ ಹನುಮನ ಕುರಿತಾದ ಭಕ್ತಿಗೀತೆಗಳ ಗಾಯನದ ಮೂಲಕ ತೊಟ್ಟಿಲೋತ್ಸವ ನೆರವೇರಿಸಿದರು. ನಂತರ ಅಭಿಷೇಕ, ಪಾನಕ, ಕೋಸಂಬರಿ ವಿತರಣೆ ಕಾರ್ಯಕ್ರಮ ಜರುಗಿತು. ಆನಂತರ ಬಂದ ಭಕ್ತಾದಿಗಳಿಗೆಲ್ಲ ಮಹಾಪ್ರಸಾದ ವಿತರಿಸಲಾಯಿತು.

ಸಮಿತಿ ಅಧ್ಯಕ್ಷ ನರೇಂದ್ರ ನಾಡಗೌಡ, ಉಪಾಧ್ಯಕ್ಷ ವೆಂಕಟೇಶ ಕುಲಕರ್ಣಿ, ಪಾಂಡುರಂಗ ದೇಶಪಾಂಡೆ, ಚಿದಂಬರ ಕುಲಕರ್ಣಿ, ಗುರುರಾಜ ಕುಲಕರ್ಣಿ, ಪ್ರಮೋದ ನಾಡಗೌಡ, ಶರತ ನಾಡಗೌಡ, ದತ್ತಾತ್ರೇಯ ದೇಶಪಾಂಡೆ, ಶ್ರೀನಿವಾಸ ಕುಲಕರ್ಣಿ, ಆನಂದ ನಾಡಗೌಡ, ಶ್ರೀನಿವಾಸ ಪಾಟೀಲ, ಶ್ರೀಧರ ನಾಡಗೌಡ, ಸಹಿತ ಮಹಿಳೆಯರು, ಮಕ್ಕಳು ಪಾಲ್ಗೊಂಡಿದ್ದರು.

# ಮಕ್ಕಳಿಗೆ ಅಡಿಪಾಯದ ಶಿಕ್ಷಣ ಬಹಳ ಮುಖ್ಯ: ಶಂಕರಗೌಡ

■ ಉದಯರಶ್ಮಿ ದಿನಪತ್ರಿಕೆ




ದೇವರಹಿಪ್ಪರಗಿ: ಮಕ್ಕಳಲ್ಲಿ ಯಾವುದೇ ರೀತಿಯ ಭೇದಭಾವ ಸಲ್ಲದು. ಮಕ್ಕಳಿಗೆ ಅಡಿಪಾಯದ ಶಿಕ್ಷಣ ಬಹಳ ಮುಖ್ಯ ಎಂದು ಉತ್ತರ ಕರ್ನಾಟಕ ರಾಜ್ಯ ರೈತಸಂಘದ ಅಧ್ಯಕ್ಷ ಶಂಕರಗೌಡ ಹಿರೇಗೌಡರ್ ಹೇಳಿದರು.

ತಾಲ್ಲೂಕಿನ ಭೈರವಾಡಗಿ ಗ್ರಾಮದಲ್ಲಿ ಮಂಗಳವಾರ ಅಂಗನವಾಡಿ ಮಕ್ಕಳ ಸಮ್ಮೇಳನ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದರು.

ಬುಧವಾರ ಸ್ನೇಹಸಂಸ್ಥೆ ಸಹಯೋಗದೊಂದಿಗೆ ಹಮ್ಮಿಕೊಂಡಿರುವ ಈ ಕಾರ್ಯಕ್ರಮ ಶ್ಲಾಘನೀಯ. ನಮ್ಮೆಲ್ಲರಿಗೂ ಮಕ್ಕಳೇ ದೇವರು ಮಕ್ಕಳಿಗಾಗಿ ಅವರ ಶಿಕ್ಷಣಕ್ಕಾಗಿ ನಾವೆಲ್ಲರೂ ಒಂದಾಗಬೇಕು. ಸಮುದಾಯದ ಸಹಕಾರ ಹಾಗೂ ಗ್ರಾಮದ ಸರ್ವರೂ ಕೂಡ ನಿಮ್ಮ ಜೊತೆಗಿರುತ್ತಾರೆ ಎಂದರು.

ಸಾನಿಧ್ಯ ವಹಿಸಿದ ಮಂಜುನಾಥ ಹಿರೇಮಠ ಮಾತನಾಡಿ, ಪಾಲಕರು ಅಂಗನವಾಡಿಗಳ ಬಗ್ಗೆ ವಿಶೇಷ ಕಾಳಜಿ ಮತ್ತು ಒಳ್ಳೆಯ ಅಭಿಪ್ರಾಯ ಬೆಳೆಸಿಕೊಳ್ಳಬೇಕು. ಗ್ರಾಮದ ಶರಣಬಸು ಅಪ್ಪಾಸಾಹೇಬ ಬಸವರೆಡ್ಡಿ ಎಂಬುವರು 20 ಲಕ್ಷ ರೂ. ಮೌಲ್ಯದ ಜಾಗವನ್ನು ಅಂಗನವಾಡಿ ಕಟ್ಟಡಕ್ಕೆ ಕೊಟ್ಟಿರುವುದು ಶ್ಲಾಘನೀಯ ಎಂದರು.

ಸ್ನೇಹ ಸಂಸ್ಥೆಯ ಸಂಪನ್ಮೂಲ ವ್ಯಕ್ತಿ ಗೌಡಪ್ಪ ಬಿರಾದಾರ ಮಾತನಾಡಿ ಇಂದಿನ ಮಕ್ಕಳೇ ಇಂದಿನ ಪ್ರಜೆಗಳು ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣದ ಅವಶ್ಯಕತೆ ಇದೆ ಎಂದರು.

ಇದೇ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರಾದ ಅಕ್ಕಮ್ಮ ಬಿರಾದಾರ, ಲಕ್ಷ್ಮೀಬಾಯಿ ಉಕ್ಕಲಿ, ಅನಸೂಬಾಯಿ ಬಿರಾದಾರ, ಶಾರದಾ ಕೊಳ್ಳಿ, ಕಲಾವತಿ ಹೊಲೆಯರ ಹಾಗೂ ಸಹಾಯಕಿಯರಾದ ಶಾಂತಾಬಾಯಿ ಹೊಕ್ಕುಂಡಿ, ಸವಿತಾ ಸರಬಡಗಿ, ಮಹಾದೇವಿ ಉಕ್ಕಲಿ, ಭಾಗ್ಯಶ್ರೀ ದಿಡ್ಡಿ, ಅಯ್ಯವ್ವ ಬೇವಿನಗಿಡದ, ಮತ್ತು ಹತ್ತನೆ ತರಗತಿಯಲ್ಲಿ ಅತಿಹೆಚ್ಚು ಅಂಕ ಪಡೆದ ಮುಕಿನಾ ಪಾನ್‌ಪರೋಶ, ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿಜಯಲಕ್ಷ್ಮಿ ಹೊಕ್ಕುಂಡಿಯವರನ್ನು ಸನ್ಮಾನಿಸಲಾಯಿತು.

ಹನುಮಂತರಾಯ ಬಿರಾದಾರ, ನಾಗಯ್ಯ ಹಿರೇಮಠ, ನಾಗಲಿಂಗ ಹೊಕ್ಕುಂಡಿ, ವೀರೇಶ ಲಚ್ಯಾಣ, ರಾಮನಗೌಡ ಬಮ್ಮನಳ್ಳಿ, ಶಿವನಗೌಡ ಬಮ್ಮನಳ್ಳಿ, ಸಿದ್ದಮ್ಮ ನಡಕೂರ, ಇಮಾಮಸಾಬ್ ಶಹಾಬಾದ ಸ್ನೇಹಸಂಸ್ಥೆಯ ಸಂಪನ್ಮೂಲ ವ್ಯಕ್ತಿಗಳಾದ ಶ್ರೀಶೈಲ ಜೋಗುರ, ಭೀಮಾಬಾಯಿ ಹೆರೂರ ಅಶ್ವಿನಿ ಉಪ್ಪಾರ ಹಾಗೂ ಮಕ್ಕಳು ಇದ್ದರು.

# ಏ.10 ರ ಪುಸ್ತಕ ಮೇಳದ ಪೋಸ್ಟರ್ ಬಿಡುಗಡೆಗೊಳಿಸಿದ ಡಿಸಿ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಏಪ್ರಿಲ್ 10 ರಿಂದ 14 ವರೆಗೆ ವಿಜಯಪುರ ನಗರದ ದರ್ಬಾರ್ ಹೈಸ್ಕೂಲ್ ಮೈದಾನದಲ್ಲಿ ನಡೆಯಲಿರುವ ಬಿಜಾಪುರ ಬುದ್ಧ, ಬಸವ, ಬಾಬಾಸಾಹೇಬ ಅಂಬೇಡ್ಕರ್ ಪುಸ್ತಕ ಮೇಳದ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪುಸ್ತಕ ಮೇಳದಲ್ಲಿ ಜಿಲ್ಲೆಯ ಜನರು, ಸಾಹಿತ್ಯಾಸಕ್ತರು, ಓದುಗರು ಪಾಲ್ಗೊಂಡು ಪುಸ್ತಕ ಮೇಳವನ್ನು ಯಶಸ್ವಿಗೊಳಿಸುವಂತೆ ಕೋರಿದರು. ಮೇ ಸಾಹಿತ್ಯ ಬಳಗದ ಚೆನ್ನು ಕಟ್ಟಿಮನಿ, ಸೋಮು ರಣದೇವಿ, ಶಿವರಾಜ ಕಟ್ಟಿಮನಿ, ಅಪ್ಪು ಚಿನಗುಂಡಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಸಾಮೂಹಿಕ ವಿವಾಹದಲ್ಲಿ ಮದುವೆ ಮಾಡಿಕೊಂಡವರೇ ಶ್ರೇಷ್ಠರು

## ಶಿರಶ್ಯಾಡ ಸಂಸ್ಥಾನ ಹಿರೇಮಠದ ಅಭಿನವ ಮುರುಗೇಂದ್ರ ಶಿವಾಚಾರ್ಯ ಅಭಿಮತ

■ ಉದಯರಶ್ಮಿ ದಿನಪತ್ರಿಕೆ




ಇಂಡಿ: ಸಾಮೂಹಿಕ ವಿವಾಹಗಳು ನಿರ್ಗತಿ-ಕರ ಮದುವೆಗಳಲ್ಲ. ಅವು ಭಾಗ್ಯವಂತರ ಮದುವೆಗಳು ಇಂತಹ ವಿವಾಹ ಮಾಡಿಕೊಂಡವರೇ ಶ್ರೇಷ್ಠರು ಎಂದು ಶಿರಶ್ಯಾಡ ಸಂಸ್ಥಾನ ಹಿರೇಮಠದ ಅಭಿನವ ಮುರುಗೇಂದ್ರ ಶಿವಾಚಾರ್ಯ ಹೇಳಿದರು.

ಅವರು ತಾಲೂಕಿನ ಇಂಗಳಗಿ ಗ್ರಾಮದಲ್ಲಿ ಶ್ರೀ ಅಲ್ಲಮಪ್ರಭು, ಹನುಮ ಜಯಂತಿ ಹಾಗೂ ಗೈಬುಸಾಬ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಉಚಿತ ಸರಳ ಸಾಮೂಹಿಕ ವಿವಾಹ ಹಾಗೂ ಧರ್ಮಸಭೆ ಕಾರ್ಯಕ್ರಮದ ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.

ಇಲ್ಲಿ ಮದುವೆಯಾಗುವ ವಧು ವರರಿಗೆ ಹರ ಗುರು ಚರಮೂರ್ತಿಗಳು, ಸಹಸ್ರಾರು ಜನ ಅಕ್ಷತೆ ಹಾಕಿ ಹರಸುತ್ತಾರೆ. ಇಂತಹ ಭಾಗ್ಯ ಬೇರೆಡೆ ಸಿಗುವುದಿಲ್ಲ. ಹೀಗಾಗಿ ಇವು ಭಾಗ್ಯವಂತರ ಮದುವೆಗಳು ಎಂದು ಹೇಳಿದರು.

ಸಾಮೂಹಿಕ ವಿವಾಹದಲ್ಲಿ ಭಾಗಿಯಾದ ನವದಂಪತಿಗಳು ಕನಿಷ್ಠ ನಾಲ್ಕು ಮಕ್ಕಳನ್ನು ಹೇರುವ ಶಪಥ ಮಾಡಬೇಕು.

ನಿಮ್ಮ ಉದರದಿಂದ ಜನಿಸಿದ ಒಂದು ಮಗು ದೇಶ ಸೇವೆಗಾಗಿ, ಒಂದು ಮಗು ಧರ್ಮ ರಕ್ಷಣೆಗಾಗಿ, ಇನ್ನೊಂದು ಮಗು ಸಮಾಜದ ರಕ್ಷಣೆಗಾಗಿ ಮತ್ತೊಂದು ಮಗು ನಿಮ್ಮ ರಕ್ಷಣೆಗೆ ಹೀಗೆ ನಾಲ್ಕು ಮಕ್ಕಳನ್ನು ಹೆರಬೇಕು ಎಂದರು.

ಸಾನಿಧ್ಯ ವಹಿಸಿದ್ದ ಇಂಡಿ ಓಂಕಾರ ಆಶ್ರಮದ ಡಾ. ಸ್ವರೂಪಾನಂದ ಸ್ವಾಮೀಜಿ, ಆಳೂರ-ಚಳಕಾಪುರ ಸಿದ್ಧಾರೂಢ ಆಶ್ರಮದ ಶಂಕರಾನಂದ ಸ್ವಾಮೀಜಿ ಆಶೀರ್ವಚನ ನೀಡಿ, ಸರಳ ಸಾಮೂಹಿಕ ವಿವಾಹದಲ್ಲಿ ಮದುವೆಯಾಗುತ್ತಿರುವ ಮದುಮಕ್ಕಳಿಗೆ ಆ ಭಗವಂತನ ಕೃಪಾಶೀರ್ವಾದ ಇರಲಿ, ತಾವೆಲ್ಲರೂ ಉತ್ತಮ ಜೀವನ ನಡೆಸಿ ಎಂದು ಶುಭ ಹಾರೈಸಿದರು.

ಶಾಸಕರ ಸಹೋದರ ಬಸವಂತರಾಯಗೌಡ ಪಾಟೀಲ ಮಾತನಾಡಿ, ಇಂಗಳಗಿ ಒಂದು ಚಿಕ್ಕ ಗ್ರಾಮವಾದರೂ ಸಹಿತ ಹಲವು ವರ್ಷಗಳಿಂದ ಪ್ರತಿ ವರ್ಷವೂ ಸಾಮೂಹಿಕ ವಿವಾಹಗಳನ್ನು ಹಮ್ಮಿಕೊಂಡು ಬಡ ಜನರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಅಲ್ಲಮಪ್ರಭು ದೇವಸ್ಥಾನ ಕಮಿಟಿಯವರು ಕಾರ್ಯನಿರ್ವಹಿಸುತ್ತಿದ್ದು, ಅವರ ಈ ಕಾರ್ಯ ಶ್ಲಾಘನೀಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಭು ಹೊಸಮನಿ ಮಾತನಾಡಿದರು,

ವೇದಿಕೆಯಲ್ಲಿ ಕಲ್ಲನಗೌಡ ಬಿರಾದಾರ, ವಜ್ರಕಾಂತ ಹೂಗಾರ, ಅಶೋಕ ಕುಲಕರ್ಣಿ, ಯಲ್ಲಪ್ಪ ಸಾತಲಗಾಂವ, ಅರ್ಜುನ ಜಾಧವ, ಗುರುಬಾಳ ಪೂಜಾರಿ, ಜಲದಪ್ಪ ಪೂಜಾರಿ, ಅಶೋಕ ಬಳಬಟ್ಟಿ, ಭೀಮು ರಾಠೋಡ ಇದ್ದರು.

ಜಾತ್ರಾ ಮಹೋತ್ಸವದಲ್ಲಿ ಅಣ್ಣಪ್ಪ ಅಹಿರಸಂಗ, ಸುಭಾಸ ಥೋರಾತ, ಬಸವರಾಜ ಜಾಧವ, ಉಮೇಶ ಬಳಬಟ್ಟಿ, ಭೀಮ ವಾಲೀಕಾರ, ಉಮೇಶ ಚವ್ಹಾಣ, ರಾಜು ಚಾಬುಕಸವಾರ, ಪ್ರಭು ಚಾಬುಕಸವಾರ, ಜಕ್ಕಪ್ಪ ಪೂಜಾರಿ, ಸದಾಶಿವ ಅಹಿರಸಂಗ, ವಿಷ್ಣು ವಾಘಮೋರೆ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ 7 ನವಜೋಡಿಗಳು ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

# ವಜ್ರಹನುಮಾನ ದೇಗುಲದಲ್ಲಿ ಹನುಮಾನ ಜಯಂತಿ ಆಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಶ್ರೀ ವಜ್ರ ಹನುಮಾನ ದೇವಸ್ಥಾನದ ಸೇವಾ ಸಮಿತಿ ಆಶ್ರಯದಲ್ಲಿ ಚೈತ್ರ ಮಾಸ ಪೂರ್ಣಿಮೆ ಪ್ರಯುಕ್ತ ಶ್ರೀ ಹನುಮಾನ ದೇವರ ಜಯಂತ್ಯೋತ್ಸವವನ್ನು ವಿಜೃಂಭಣೆಯಿಂದ ಆಚ-ರಿಸಲಾಗುತ್ತಿದೆ ಎಂದು ಸೇವಾ ಸಮಿತಿ ಅಧ್ಯಕ್ಷ ಪಾಂಡು ಸಾಹುಕಾರ ದೊಡ್ಡಮನಿ ತಿಳಿಸಿದ್ದಾರೆ.



ಜಯಂತ್ಯೋತ್ಸವ ಅಂಗವಾಗಿ ಬೆಳಿಗ್ಗೆ 4 ಗಂಟೆಗೆ ಮಂಗಳವಾದ್ಯಗಳೊಂದಿಗೆ ಶ್ರೀ ಹನುಮಾನ ದೇವರಿಗೆ ವಿಶೇಷ ಅಲಂಕಾರ ಹಾಗೂ ಪಂಚಾಮೃತ ಅಭಿಷೇಕ ನೆರವೇರಿಸಲಾಗುತ್ತದೆ. ಬೆಳಿಗ್ಗೆ 6.22ಕ್ಕೆ ಶ್ರೀ ವಜ್ರ ಹನುಮಾನ್ ದೇವರನ್ನು ತೊಟ್ಟಿಲಲ್ಲಿ ಹಾಕಿ ನಾಮಕರಣ ಕಾರ್ಯಕ್ರಮ ನಡೆಯಲಿದೆ. ಬಳಿಕ ಮಂಗಳಾರತಿ ಹಾಗೂ ಆಶೀರ್ವಚನ ಕಾರ್ಯಕ್ರಮಗಳು ಜರುಗಲಿವೆ.

ಮಧ್ಯಾಹ್ನ 12.30ಕ್ಕೆ ದೇವಸ್ಥಾನದ ಆವರಣದಲ್ಲಿ ಅನ್ನಪ್ರಸಾದ ಸೇವೆ ಏರ್ಪಡಿಸಲಾಗಿದ್ದು, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವ ಹಿಸುವಂತೆ ಸಮಿತಿ ಅಧ್ಯಕ್ಷರು ಮನವಿ ಮಾಡಿದ್ದಾರೆ.

# ಉತ್ತಮ ಆಡಳಿತಗಾರನ ಮೊದಲ ಗುಣ ಸಹನೆ : ಡಾ. ಕುಲಕರ್ಣಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸಹನೆ, ಕಠಿಣ ಪರಿಶ್ರಮ, ತ್ಯಾಗ ಹಾಗೂ ಸಮರ್ಪಣಾ ಮನೋಭಾವಗಳನ್ನು ಅಳವಡಿಸಿಕೊಂಡವರು ಉತ್ತಮ ಆಡಳಿತಗಾರರಾಗಲು ಸಾಧ್ಯ ಎಂದು ಬಿಎಲ್‌ಡಿಇ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಡಾ.ಆರ್.ವಿ.ಕುಲಕರ್ಣಿ ಹೇಳಿದರು.

ನಗರದ ಬಿಎಲ್‌ಡಿಇ ಸಂಸ್ಥೆಯ ಎಸ್‌ಬಿ ಕಲಾ ಮತ್ತು ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಮಾರ್ಚ.31 ರಂದು ಹಮ್ಮಿಕೊಳ್ಳಲಾಗಿದ್ದ ಪ್ರಾಚಾರ್ಯೆ ಡಾ.ಆರ್.ಎಂ.ಮಿರ್ಧೆ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಉತ್ತಮ ಆಡಳಿತಗಾರನ ಮೊದಲ ಗುಣ ಸಹನೆ. ಪ್ರೊಫೆಸರ್ ಆಗಬೇಕು, ಪ್ರಿನ್ಸಿಪಲ್ ಆಗಬೇಕು ಎನ್ನುವ ಕನಸು ಎಲ್ಲರಲ್ಲೂ ಇರುತ್ತದೆ. ಆದರೆ ಪ್ರಾಚಾರ್ಯ ಹುದ್ದೆ ನಿರ್ವಹಣೆ ಅಷ್ಟೊಂದು ಸುಲಭವಾದದ್ದಲ್ಲ. ನಾವು ಆಡಳಿತ ಮಾಡಿ ನಮ್ಮ ಹೆಜ್ಜೆ ಗುರುತುಗಳನ್ನು ಆ ಸಂಸ್ಥೆಯಲ್ಲಿ ಉಳಿಸಿಕೊಂಡು ಹೋಗಬೇಕಾದರೆ ಸಂಂ-ಯಮ ಹಾಗೂ ವೃತ್ತಿ ಮೇಲಿನ ನಮ್ಮ ಶ್ರದ್ಧೆ ಬಹಳ ಮುಖ್ಯವಾಗುತ್ತವೆ. ಆ ನಿಟ್ಟಿನಲ್ಲಿ ಡಾ.ಆರ್.ಎಂ.ಮಿರ್ಧೆ ಅವರು ಉತ್ತಮವಾದ ಆಡಳಿತ ಮಾಡಿದ್ದಾರೆ. ಅತ್ಯಂತ ಜವಾಬ್ದಾರಿಯುತವಾಗಿ ಹುದ್ದೆಯ ಗೌರವ ಹೆಚ್ಚಿಸಿದ್ದಾರೆ. ಸಂಸ್ಥೆಯ ಬೆಳವಣಿಗೆಗೆ ಹೆಗಲು ನೀಡಿ ನಮಗೆಲ್ಲ ಮಾದರಿಯಾಗಿದ್ದಾರೆ ಎಂದು ಹೇಳಿದರು.

ನಿವೃತ್ತ ಪ್ರಾಚಾರ್ಯೆ ಡಾ.ಆರ್.ಎಂ.ಮಿರ್ಧೆ ಮಾತನಾಡಿ, ಬಿಎಲ್‌ಡಿಇ ಸಂಸ್ಥೆಯಲ್ಲಿ ಸುಧೀರ್ಘ 38 ವರ್ಷಗಳ ಸಾರ್ಥಕ ವೃತ್ತಿ ಬದುಕು ಸಾಗಿಸಿದ್ದೇನೆ. ಈ ಸಂಸ್ಥೆ ನನಗೆ ಬಹಳಷ್ಟು ಜವಾಬ್ದಾ-ರಿಯನ್ನು ನೀಡಿತ್ತು. ಅವುಗಳನ್ನು ನಿಮ್ಮೆಲ್ಲರ ಸಹಕಾರ ಹಾಗೂ ಸಲಹೆಯ ಮೇರೆಗೆ ಯಶಸ್ವಿಯಾಗಿ ನಿರ್ವಹಣೆ ಮಾಡಿದ್ದೇನೆ ಎಂದರು.

ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಪ್ರೊ.ಎಸ್.ಹೆಚ್.ಲಗಳಿ, ಆಡಳಿತಾಧಿಕಾರಿ ಪ್ರೊ.ವಿ.ಎಸ್,ಬಗಲಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಿಎಲ್‌ಡಿಇ ಸಂಸ್ಥೆಯ ದೈಹಿಕ ನಿರ್ದೇಶಕರು ಎಸ್ ಎಸ್ ಕೋರಿ, ಪಿಯುಸಿ ಆಡಳಿತಾಧಿಕಾರಿ ಐ. ಎಸ.ಕಾಳಪ್ಪನವರ, ಬಿಎಲ್‌ಡಿಇ ಸಂಸ್ಥೆಯ ಅಧಿಕಾರಿಗಳು, ಪ್ರಭಾರ ಪ್ರಾಚಾರ್ಯೆ ಡಾ.ಅನೀಲ ನಾಯಕ ಡಾ.ಪಿ.ಎಸ್ ಪಾಟೀಲ ನೀವೃತ್ತ ಪ್ರಾಚಾರ್ಯ ಡಾ.ಯು. ಎಸ್.ಪೂಜೇರಿ, ಡಾ.ಎಸ್.ಟಿ.ಮೇರವಾಡೆ, ಪ್ರೊ.ಆರ್.ಹೆಚ್.ಬಿದರಿ, ಪ್ರೊ.ಜಿ.ಆರ್. ಅಂಬಲಿ, ಪಿಯುಸಿ ಪ್ರಾಚಾರ್ಯ ಪ್ರೊ.ಸಿ.ಬಿ.ಪಾಟೀಲ, ಪ್ರೊ.ಎಸ್.ಜೆ ಜೀರಗಾಳಿ, ಡಾ.ಎಸ್.ಬಿ.ಕಮತಿ ವಿವಿಧ ಮಹಾವಿದ್ಯಾಲಯದ ಪ್ರಾಚಾರ್ಯರು, ಪ್ರಾಧ್ಯಾಪಕರು, ಬೋಧಕರು, ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR